ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

EMAIL : dairyadadaari@gmail.com ಸಂಪುಟ: 01 ಸಂಚಿಕೆ: 81

ಬೆಲೆ ರೂ : 2.00

ರಾಯಚೂರು

ಪುಟ: 4

DAIRYADA DAARI

RNI NO: KNKAN/25/A2795 ಬುಧವಾರ: 04-03-2026

**SEHRI & IFTARI TIME**

DAY WEDNESDAY
RAMZAN : 14
DATE: 04.03.2026
END TIME OF SEHRI :5:22 AM
FAJAR AZAAN : 5:27 AM

IFTAR TIME : 6:31 PM

ಸೈಯದ್ ಅಹ್ಮದ್ ಹುಸೇನಿ ಮತ್ ವಾಲೆ
ಕಾರ್ಯದರ್ಶಿಗಳು : ಮತ್ ವಾಲೆ
ಸಾಹೇಬ್ ಪಬ್ಲಿಕ್ ಸ್ಕೂಲ್ ಮಾನ್ವಿ
ಸಂಪಾದಕರು : ಧೈರ್ಯದ ದಾರಿ ಕನ್ನಡ
ದಿನಪತ್ರಿಕೆ



ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
6360866626

# ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಇಂಧನ ಸೆಸ್ ಹೆಚ್ಚಳಕ್ಕೆ ಮುಂದಾದ ಸರ್ಕಾರ..?!

**ಬೆಂಗಳೂರು,ಮಾ.3–** ಉಳ್ಳವರು ಗ್ಯಾರಂಟಿಗಳನ್ನು ಬಡವರಿಗೆ ಬಿಟ್ಟುಕೊಡುವಂತೆ ಕರೆ ನೀಡಲು ಮುಂದಾಗಿರುವ ರಾಜ್ಯ ಸರ್ಕಾರ ಇದೀಗ ಬಜೆಟ್‌ನಲ್ಲಿ ಇಂಧನದ ಮಾರಾಟ ಮೇಲಿನ ಸೆಸ್ ಹೆಚ್ಚಳ ಮಾಡಲು ಮುಂದಾಗಿದೆ.

ಮಹತ್ವಕಾಂಕ್ಷೆಯ 5 ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಹೆಣಗಾಡುತ್ತಿರುವ ರಾಜ್ಯ ಸರ್ಕಾರ, ಬೇರೆ ಬೇರೆ ಮೂಲಗಳಿಂದ ಆದಾಯ ಸರಿದೂಗಿಸಲು ಭಾರೀ ಸರ್ಕಸ್ ನಡೆಸುತ್ತಿದೆ. ಹೀಗಾಗಿಯೇ ಆರ್ಥಿಕವಾಗಿ ಸಿರಿವಂತರು ಗ್ಯಾರಂಟಿ ಯೋಜನೆಗಳನ್ನು ಪಡೆಯದೆ ಉದಾರತೆ ತೋರಿ ಎಂದು ಸಚಿವರು ಪ್ರತಿನಿತ್ಯ ಹೇಳುತ್ತಿದ್ದಾರೆ.

ಈ ಹಿಂದೆ ಪ್ರಧಾನಿ ನರೇಂದ್ರ ಮೋದಿಯವರು ಬಡತನ ರೇಖೆಗಿಂತ ಕೆಳಗಿರುವವರಿಗೆ ( ಬಿಪಿಎಲ್ ) ಉಜ್ವಲ ಯೋಜನೆಯನ್ನು ಜಾರಿ ಮಾಡಿದ್ದರು. ಪರಿಣಾಮ ಲಕ್ಷಾಂತರ ಜನರು ಮೋದಿ ಕರೆಗೆ ಓಗೊಟ್ಟು ಯೋಜನೆಯನ್ನು ತ್ಯಜಿಸಿದ್ದರು.




ಈಗ ಸಿ.ಎಂ ಸಿದ್ದರಾಮಯ್ಯ ಕೂಡ ಇದೇ ತಂತ್ರವನ್ನು ಅನುಕರಣೆ ಮಾಡಲಿದ್ದಾರೆ ಎಂದು ಮೂಲಗಳು ತಿಳಿಸಿವೆ.
ಶುಕ್ರವಾರ ತಮ ದಾಖಲೆಯ 17ನೇ ಬಜೆಟ್ ಮಂಡಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪೆಟ್ರೋಲ್-ಡೀಸೆಲ್ ಮಾರಾಟದ ಮೇಲಿನ ಸೆಸ್ ಮೇಲ್ತೆರಿಗೆ ಹೆಚ್ಚಳ ಮಾಡಲಿದ್ದಾರೆ. ಅಂದರೆ ಪ್ರತಿ 1 ಲೀಟರ್ ಡೀಸೆಲ್ ಮತ್ತು ಪೆಟ್ರೋಲ್ ಮೇಲಿನ ಮಾರಾಟದಲ್ಲಿ 2 ರೂ. ಏರಿಕೆ ಮಾಡಲು ಸರ್ಕಾರ ತೀರ್ಮಾನಿಸಿದೆ.

ಈ ಹಿಂದೆ ರಾಜ್ಯ ಸರ್ಕಾರ 2025ರ ಏಪ್ರಿಲ್ 2ರಂದು ಡೀಸೆಲ್ ಮತ್ತು ಪೆಟ್ರೋಲ್ ಮೇಲಿನ ದರವನ್ನು ಕ್ರಮವಾಗಿ 2 ರೂಪಾಯಿಗೆ ಏರಿಕೆ ಮಾಡಿತ್ತು. ಕರ್ನಾಟಕದಲ್ಲಿ ಪ್ರಸ್ತುತ ಡೀಸೆಲ್ ಮೇಲಿನ ಮಾರಾಟ ತೆರಿಗೆ 21.77 ರೂ, ಇದ್ದರೆ ಅದೇ ರೀತಿ ಪೆಟ್ರೋಲ್ ಮೇಲಿನ ಮಾರಾಟ ತೆರಿಗೆಯು ರೂ. 18 ಇದೆ. ಹೊಸದಾಗಿ ಮಾರಾಟ ತೆರಿಗೆ ಹೆಚ್ಚಳ ಮಾಡಿದರೆ ವಾಹನ ಸವಾರರ ಜೇಬಿಗೆ ಕತ್ತರಿ ಬೀಳುವುದು ಗ್ಯಾರಂಟಿ.
ಇಲಾಖೆಗಳಿಗೆ ನೀಡಿದ್ದ ರಾಜಸ್ವ ಸಂಗ್ರಹಣೆಯ ಗುರಿ ಈಗಾಗಲೇ ಅತಿಯಾಗಿದೆ. ಹೀಗಾಗಿ ಹೊಸ ಆದಾಯದ ಮೂಲಗಳನ್ನು ಅರಸುವುದು ಅನಿವಾರ್ಯವಾಗಿದ್ದು, ಪ್ರತಿ ಲೀಟರ್ ಪೆಟ್ರೊ?ಲ್ ಹಾಗೂ ಡೀಸೆಲ್ ಮೇಲೆ 1 ರೂ. ಹೆಚ್ಚುವರಿ ಮಾರಾಟ ತೆರಿಗೆ ವಿಧಿಸುವುದರಿಂದ ತಕ್ಕಮಟ್ಟಿಗೆ ಸಂಪನೂಲ ಕ್ರೊಡೀಕರಣಕ್ಕೆ ವೇಗ ನೀಡಬಹುದೆಂದು ಚರ್ಚಿಸಲಾಗುತ್ತಿದೆ. 2ನೇಪುಟಕ್ಕೆ►

## ಇಂಡೋಗ್ಲೋಬ್ ಟ್ಯಾಲೆಂಟ್ ಅವಾರ್ಡ್ –2026 ಅಂಗವಾಗಿ 75 ಲಕ್ಷ ವಿದ್ಯಾರ್ಥಿ ವೇತನ: ತಿಮ್ಮೆಗೌಡ



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪತ್ರಿಕಾ ಭವನದಲ್ಲಿ ಇಂಡೋಗ್ಲೋಬ್ ಪಿ.ಯು.ಕಾಲೇಜ್ ಬೆಂಗಳೂರಿನ ಅಧ್ಯಕ್ಷರಾದ ತಿಮ್ಮೆಗೌಡ ಮಾತನಾಡಿ ಕಲ್ಯಾಣ ಕರ್ನಾಟಕ ಭಾಗ ಶೈಕ್ಷಣಿಕವಾಗಿ ಹಿಂದುಳಿದಿದ್ದರು ಈ ಭಾಗದಲ್ಲಿ ಪ್ರತಿಭೆಗಳಿಗೆ ಕೊರತೆ ಇಲ್ಲ ಅದ್ದರಿಂದ ಈ ಭಾಗದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ನೆರವು ನೀಡಿ ಪ್ರೋತ್ಸಾಹಿಸುವ ಉದ್ದೇಶದಿಂದ ಇಂಡೋಗ್ಲೋಬ್ ಪಿ.ಯು.ಕಾಲೇಜ್ ಬೆಂಗಳೂರಿನ ವತಿಯಿಂದ ಇಂಡೋಗ್ಲೋಬ್ ಟ್ಯಾಲೆಂಟ್ ಅವಾರ್ಡ್ –2026 ಅಂಗವಾಗಿ ಈ ಭಾಗದ ಹೊಸಪೇಟ್, ಬಾಗಲಕೋಟೆ, ಸಿಂಧನೂರಿನಲ್ಲಿ ಇದುವರೆಗೂ 10 ನೇತರಗತಿ ವಿದ್ಯಾರ್ಥಿಗಳಿಗೆ 75 ಲಕ್ಷ ಶಿಷ್ಯ ವೇತನ ವಿತರಣೆಗಾಗಿ ಪ್ರವೇಶ ಪರೀಕ್ಷೆಗಳನ್ನು ನಡೆಸಲಾಗಿದ್ದು ಏ.12 ರಂದು ಶಹಪುರ ಮತ್ತು ಏ. 5 ರಂದು ಬೆಂಗಳೂರಿನಲ್ಲಿ ಪ್ರವೇಶ ಪರೀಕ್ಷೆಗಳನ್ನು ನಡೆಸಲಾಗುತ್ತಿದೆ. 10 ನೇ ತರಗತಿಯ ವಾರ್ಷಿಕ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕಗಳನ್ನು ಪಡೆದವರಿಗೆ ಹಾಗೂ ಲಕ್ಕಿ ಡಿಪೇ ನಲ್ಲಿ ಗೇಲವು ಸಾಧಿಸಿದ 3 ವಿಧ್ಯಾರ್ಥಿಗಳಿಗೆ ಉಚಿತ ವಸತಿಯುತ ಶಿಕ್ಷಣವನ್ನು ನೀಡಲಾಗುವುದು. ಪಿ.ಯು.ವಿದ್ಯಾರ್ಥಿಗಳಿಗೆ ವಿಜ್ಞಾನ ಮತ್ತು ವಾಣಿಜ್ಯ ವಿಷಯದ ಜೊತೆಗೆ ವ್ಯಕ್ತಿತ್ವ ವಿಕಾಸನ ಹಾಗೂ ಜರ್ಮಾನ್ ಭಾಷೆ ಕಲಿಕೆ ಜೋತೆಗೆ ವೃತ್ತಿಪರ ಮಾರ್ಗದರ್ಶನವನ್ನು ಕೂಡ ನೀಡಲಾಗುವುದು ಎಂದು ತಿಳಿಸಿದರು.
ಇಂಡೋಗ್ಲೋಬ್ ಪಿ.ಯು.ಕಾಲೇಜ್ ಆಡಳಿತಾಧಿಕಾರಿ ಶೈಪುದ್ದೀನ್, ಉಪನ್ಯಾಸಕರಾದ ರಾಘವೇಂದ್ರ ಚೌಡ್ಕಿ, ಅಖೀಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾ.ಅಧ್ಯಕ್ಷ ಅರುಣಚಂದಾ ಇದ್ದರು.

## ಜಿಲ್ಲಾಡಳಿತದಿಂದ ಯೋಗಿನಾರೇಯಣ ಯತೀಂದ್ರರ ಜಯಂತ್ಯುತ್ಸವ



ಧೈರ್ಯದ ದಾರಿ

**ರಾಯಚೂರು ಮಾ,3–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಮಾರ್ಚ 3ರಂದು ಶ್ರೀ ಯೋಗಿನಾರೇಯಣ ಯತೀಂದ್ರರ (ಕೈವಾರ ತಾತಯ್ಯ) ಜಯಂತ್ಯುತ್ಸವ ನಡೆಯಿತು.

ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆದ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳ ಕಚೇರಿಯ ತಹಶೀಲ್ದಾರ್ ಪರಶುರಾಮ ಅವರು ಉದ್ಘಾಟಿಸಿ ಮಾತನಾಡಿ, ಮಹನೀಯರ ಜಯಂತಿಗಳು ಆಚರಣೆಗಷ್ಟೆ ಸೀಮಿತವಾಗದೇ ಅವರ ಆದರ್ಶ, ತತ್ವಗಳನ್ನು ನಾವು ಮೈಗೂಡಿಸಿಕೊಳ್ಳಬೇಕು ಎಂದು ಸಲಹೆ ಮಾಡಿದರು.

17ನೇ ಶತಮಾನದಲ್ಲಿ ಜೀವಿಸಿದ್ದ ಕೈವಾರ ತಾತಯ್ಯ ಅವರು ಪವಾಡ ಪುರುಷರಾಗಿದ್ದರು. ತಾತಯ್ಯ ಅವರನ್ನು ಒಂದೇ ಸಮುದಾಯಕ್ಕೆ ಸೀಮಿತಗೊಳಿಸದೆ ಎಲ್ಲ ಸಮಾಜಗಳು ಸ್ಮರಿಸಿಕೊಳ್ಳಬೇಕಿದೆ. ಸಮಾಜದಲ್ಲಿನ ಅಂಕುಡೊಂಕುಗಳನ್ನು ತಿದ್ದಿ, ತಾರತಮ್ಯ, ಅಸಮಾನತೆ ಹೋಗಲಾಡಿಸಲು ತಾತಯ್ಯರು ಕೈಗೊಂಡ ಸಾಮಾಜಿಕ ಸುಧಾರಣೆ ಕಾರ್ಯ ಇಂದಿಗೂ ಮಾದರಿಯಾಗಿದೆ. ತ್ರಿಕಾಲ ಜ್ಞಾನಿಯಾಗಿದ್ದ ಕೈವಾರ ತಾತಯ್ಯ ಅವರು ಪ್ರಾಪಂಚಿಕ ಆಗು-ಹೋಗುಗಳನ್ನು ಅರಿತು ಮನುಕುಲದ ಒಳಿತಿಗಾಗಿ ಅಪಾರ ಕೊಡುಗೆ ನೀಡಿದ್ದಾರೆ. ಹಾಗಾಗಿ ರಾಜ್ಯ ಸರ್ಕಾರವು ಅವರ ಜಯಂತಿ ಆಚರಣೆ ಮಾಡುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಿಬ್ಬಂದಿ ದ್ರಾಕ್ಷಿ, ಅನೀಲ್ ಕುಮಾರ್, ವಿನೋದ ಕುಮಾರ್, ಸುರೇಶ, ಶೈಲಜಾ ಸೇರಿದಂತೆ ಇತರರು ಇದ್ದರು.

## ಜಿಲ್ಲಾ ನ್ಯಾಯಾಲಯಕ್ಕೆ ಹುಸಿ ಬಾಂಬ್ ಕರೆ: ಕೆಲಕಾಲ ಆತಂಕ, ಪರಿಶೀಲನೆ

**ಕಲಬುರಗಿ,ಮಾ.3–**ನಗರದ ಜಿಲ್ಲಾ ನ್ಯಾಯಾಲಯದಲ್ಲಿ ಬಾಂಬ್ ಇಡಲಾಗಿದೆ ಎಂದು ಹುಸಿ ಬಾಂಬ್ ಕರೆ ಬಂದ ಹಿನ್ನೆಲೆಯಲ್ಲಿ ನ್ಯಾಯಾಲಯದ ಆವರಣದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು.ಜಿಲ್ಲಾ ನ್ಯಾಯಾಲಯದಲ್ಲಿ ಬಾಂಬ್ ಇಡಲಾಗಿದೆ ಎಂದು ಇ-ಮೇಲ್ ಬಂದಿದೆ ಎನ್ನಲಾಗಿದ್ದು, ಈ ಹಿನ್ನೆಲೆಯಲ್ಲಿ ಬಾಂಬ್ ನಿಷ್ಕ್ರಿಯ ದಳ, ಶ್ವಾನದಳ ಮತ್ತು ಬೆರಳಚ್ಚು ತಜ್ಞರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.ಹುಸಿ ಬಾಂಬ್ ಕರೆ ಹಿನ್ನೆಲೆಯಲ್ಲಿ ನ್ಯಾಯಾಲಯದ ಆವರಣರದಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ನ್ಯಾಯಾಧೀಶರು, ನ್ಯಾಯವಾದಿಗಳು, ಸಿಬ್ಬಂದಿಗಳು ಕೆಲಕಾಲ ಆತಂಕಗೊಂಡಿದ್ದರು. ಬಾಂಬ್ ನಿಷ್ಕ್ರಿಯ ದಳ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಇದೊಂದು ಹುಸಿ ಬಾಂಬ್ ಕರೆಯಾಗಿದ್ದು, ಯಾವುದೇ ಆತಂಕ ಪಡುವ ಅಗತ್ಯವಿಲ್ಲ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದ್ದಾರೆ.

## ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ವತಿಯಿಂದ ವಿಜಲ್ ಬ್ಲೋವರ್ ಪಾಲಿಸಿ ಜಾರಿ : ಭ್ರಷ್ಟಾಚಾರದ ವಿರುದ್ಧ ದೂರು ನೀಡಲು ಮುಕ್ತ ಅವಕಾಶ

ಧೈರ್ಯದ ದಾರಿ

**ರಾಯಚೂರು ಮಾ,3–** ಆಯುಷ್ಮಾನ್ ಭಾರತ್ ಪ್ರಧಾನಮಂತ್ರಿ ಜನಾರೋಗ್ಯ ಮುಖ್ಯ ಮಂತ್ರಿಗಳ ಆರೋಗ್ಯ ಕರ್ನಾಟಕ ಎಬಿ-ಪಿಎಂ-ಜೆಎವೈ-ಸಿಎಂಎಸ್-ಎಆರ್‌ಕೆ (AB-PM-JAY-CMs-ArK) ಯೋಜನೆಯಡಿ ಸರ್ಕಾರಿ ಅಥವಾ ಖಾಸಗಿ ಆಸ್ಪತ್ರೆಗಳು ಅಥವಾ ಯೋಜನೆಯ ಅನುಷ್ಠಾನದಲ್ಲಿ ಭಾಗಿಯಾಗುವ ಯಾವುದೇ ಪಾಲುದಾರರ ವಿರುದ್ಧ ಭ್ರಷ್ಟಾಚಾರ, ವೈದ್ಯಕೀಯ ಮತ್ತು ವೈದ್ಯಕೀಯೇತರ ವಂಚನೆ ಅಥವಾ ಉದ್ದೇಶಪೂರ್ವಕವಾಗಿ ಅಥವಾ ವಿವೇಚನಾಯುತವಾಗಿ ಅಧಿಕಾರ ದುರುಪಯೋಗದಂತಹ ಯಾವುದೇ ಆರೋಪಗಳು ಕಂಡುಬಂದಲ್ಲಿ ಆರೋಪಿತರ ವಿರುದ್ಧ ದೂರು/ಮಾಹಿತಿ ನೀಡುವ ಯಾವುದೇ ವ್ಯಕ್ತಿಯ ಗುರುತನ್ನು ಗೌಪ್ಯವಾಗಿಟ್ಟು ಇಂತಹ ಪ್ರಕರಣಗಳ ಮಾಹಿತಿ ಪಡೆದು ವಿಚಾರಣೆ ನಡೆಸಲು ವಿಜಲ್ ಬ್ಲೋವರ್ ಪಾಲಿಸಿ ( (Whistle Blower Policy) ಯನ್ನು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ನಲ್ಲಿ ಸರ್ಕಾರದ ಆದೇಶದ ಅನ್ವಯ ಅನುಷ್ಠಾನಗೊಳಿಸಲಾಗಿರುತ್ತದೆ.

ಅದರಂತೆ, ಎಬಿ-ಪಿಎಂ-ಜೆಎವೈ-ಸಿಎಂಎಸ್-ಎಆರ್‌ಕೆ (AB-PM-JAY-CMs-ArK) ಅನುಷ್ಠಾನದಲ್ಲಿ ಭಾಗಿಯಾಗಿರುವ ಯಾವುದೇ ಪಾಲುದಾರರ ವಿರುದ್ಧ ಕೇಳಿಬರುವ ಅಂತಹ ಆರೋಪದ ಮೇಲೆ ದೂರುಗಳನ್ನು ಸ್ವೀಕರಿಸಲು, ವಿಚಾರಿಸಲು, ಅಂತಹ ದೂರು ನೀಡುವ ವ್ಯಕ್ತಿಯ ಗೌಪ್ಯತೆಯನ್ನು ಕಾಪಾಡಲು ಹಾಗೂ ಅದಕ್ಕೆ ಪ್ರಾಸಂಗಿಕವಾದ ವಿಷಯುಗಳ ಬಹಿರಂಗಪಡಿಸುವಿಕೆಯ ವಿರುದ್ಧ ಸಾಕಷ್ಟು ಸುರಕ್ಷತೆಗಳನ್ನು ಒದಗಿಸುವುದು ವಿಜಲ್ ಬ್ಲೋವರ್ ಪಾಲಿಸಿ (Whistle Blower Policy) ಯ ಉದ್ದೇಶವಾಗಿರುತ್ತದೆ.

ಗುರುತರ ಆರೋಪಗಳ ಬಹಿರಂಗ ಪಡಿಸುವಿಕೆಯನ್ನು ಸುರಕ್ಷಿತವಾಗಿ ಸ್ವೀಕರಿಸುವ ಮತ್ತು ಅದರ ಬಗ್ಗೆ, ವಿವರವಾದ ತನಿಖೆ ನಡೆಸಿ ಪ್ರಾಥಮಿಕ ವರದಿಯನ್ನು ವಿಜಲ್ ಬ್ಲೋವರ್ ಪಾಲಿಸಿ (Whistle Blower Committee ) ಗೆ ಸಲ್ಲಿಸುವ ನಾಮನಿರ್ದೇಶಿತ/ನೇಮಕಾತಿಗೊಂಡ ಒಬ್ಬ ಅಧಿಕಾರಿಯನ್ನು ವಿಜಲ್ ಬ್ಲೋವರ್ ಆಫೀಸಂ (Whistle Blower Officer) ದು ಕರೆಯಲಾವುದು. ಅದರಂತೆ ಮುಖ್ಯ ಜಾಗೃತಾಧಿಕಾರಿಗಳು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಇವರು ವಿಜಲ್ ಬ್ಲೋವರ್ ಆಫೀಸರ್ (Whistle Blower Committee) ಆಗಿರುತ್ತಾರೆ.

ವಿಜಲ್ ಬ್ಲೋವರ್ ಕಮೀಟಿ (Whistle Blower Committee) ಯು ವಿಜಲ್ ಬ್ಲೋವರ್ ಆಫೀಸರ್ (Whistle Blower Officer) ಸಲ್ಲಿಸಿದ ತನಿಖಾ ವರದಿಯ ಕುರಿತು ಮತ್ತಷ್ಟು ಚರ್ಚಿಸಿ ಪರಿಶೀಲಿಸುತ್ತದೆ. ಈ ಸಮಿತಿಯು ಸಕ್ಷಮ ಪ್ರಾಧಿಕಾರದ ನಿರ್ದಿಷ್ಟ ಅನುಮೋದನೆಯ ಮೇರೆಗೆ ಅಗತ್ಯವಿರುವ ಯಾವುದೇ ಇತರ ಅಧಿಕಾರಿಯ ಸಹಾಯವನ್ನು ಪಡೆದು ಕ್ರಮವಹಿಸುತ್ತದೆ. ಯಾವುದೇ ಮಾಹಿತಿ ಇದ್ದಲ್ಲಿ ವಿಜಲ್ ಬ್ಲೋವರ್ (Whistle Blower) ಧಿಕಾರಿಗೆ ಮಾಹಿತಿ ಸಲ್ಲಿಸಬಹುದು. ಮಾಹಿತಿ ಸಲ್ಲಿಸಿದವರ ವಿವರವನ್ನು ಗೌಪ್ಯವಾಗಿಡಲಾಗುವುದು. ದೂರು ಸಲ್ಲಿಸಲು ವಾಟ್ಸಪ್ ನಲ್ಲಿ ವಿವರವಾದ ಮಾಹಿತಿ ನೀಡಲು ದೂರವಾಣಿ ಸಂಖ್ಯೆ: 9480819724 ಗೆ ಸಂಪರ್ಕಿಸಬಹುದು. ಆಸ್ಪತ್ರೆಗಳು, ಫಲಾನುಭವಿಗಳು, ಸಿಬ್ಬಂದಿಗಳು, ಸಾರ್ವಜನಿಕರು ಈ ಸೌಲಭ್ಯವನ್ನು ಬಳಸಿಕೊಳ್ಳಬಹುದು.

ಹೆಚ್ಚಿನ ಮಾಹಿತಿಗಾಗಿ ಮುಖ್ಯ ಜಾಗೃತಾಧಿಕಾರಿಗಳು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್, "ಆರೋಗ್ಯ ಸೌಧ", 7ನೇ ಮಹಡಿ, 1ನೇ ಕ್ರಾಸ್, ಮಾಗಡಿ ರಸ್ತೆ, ಬೆಂಗಳೂರು-560 023 ಅಥವಾ ದೂರವಾಣಿ ಸಂಖ್ಯೆ 9480819724 ಅಥವಾ ಉಚಿತ ಸಹಾಯವಾಣಿ ಸಂಖ್ಯೆ: 18004258330 ಹಾಗೂ ಇಮೇಲ್ ವಿಳಾಸ: cvosast@gmail.com ಗೆ ಸಂಪರ್ಕಿಸಬಹುದು ಎಂದು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್ ಪ್ರಕಟಣೆಯಲ್ಲಿ ತಿಳಿಸಿದೆ.

## ಮಾ.6 ರಂದು ಶ್ರೀ ಛತ್ರಪತಿ ಶಿವಾಜಿ ಮಹಾರಾಜರ 396 ನೇ ಜಯಂತ್ಯೋತ್ಸವ ಕಾರ್ಯಕ್ರಮ: ಬಸವನಗೌಡ ವಿ.ಅಲ್ದಾಳ್



ಧೈರ್ಯದ ದಾರಿ

**ಮಾನ್ವಿ:** ಪಟ್ಟಣದ ಪತ್ರಿಕಾ ಭವನದಲ್ಲಿ ಶ್ರೀ ಛತ್ರಪತಿ ಶಿವಾಜಿ ಯುವಕರ ಸೇನೆ ಮಾನ್ವಿ ತಾಲೂಕ ಅಧ್ಯಕ್ಷರಾದ ಬಸವನಗೌಡ ವಿ.ಅಲ್ದಾಳ್ ಮಾತನಾಡಿ ಶ್ರೀ ಛತ್ರಪತಿ ಶಿವಾಜಿ ಯುವಕರ ಸೇನೆ ಮಾನ್ವಿ ತಾಲೂಕ ಸಮಿತಿ ವತಿಯಿಂದ ಮಾ.6 ರಂದು ಮಧ್ಯಾಹ್ನ 3 ರಿಂದ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ 396 ನೇ ಜಯಂತ್ಯೋತ್ಸವ ಅಂಗವಾಗಿ ಪಟ್ಟಣದ ಟಿ.ಎ.ಪಿ.ಸಿ.ಎಂ.ಎಸ್. ಬಯಲು ಜಾಗದಿಂದ ಬಸವ ವೃತ್ತ,ಶ್ರೀ ಮಹರ್ಷಿ ವಾಲ್ಮೀಕಿ ವೃತ್ತದ ಮೂಲಕ ಕಲ್ಮಠ ಧ್ಯಾನ ಮಂದಿರದ ವರೆಗೆ ಬೃಹತ್ ಶೋಭಾಯಾತ್ರೆ ಹಾಗೂ ಶ್ರೀ ಛತ್ರಪತಿ ಶಿವಾಜಿ ಮಹಾರಾಜರ ಭಾವಚಿತ್ರ ಮೆರವಣಿಗೆ ಹಮ್ಮಿಕೊಳ್ಳ ಲಾಗಿದೆ ಶೋಭಾಯಾತ್ರೆಯಲ್ಲಿ ವಿವಿಧ ಜನಪದ ಕಲಾ ತಂಡ ಗಳು ಭಾಗವಹಿಸಲಿವೇ. ಸಂಜೆ 7ರಿಂದ ಕಲ್ಮಠ ಧ್ಯಾನ ಮಂದಿ ರದ ವೇದಿಕೆ ಕಾರ್ಯ ಕ್ರಮದ ದಿವ್ಯಸಾನಿಧ್ಯವನ್ನು ಕರೇಗುಡ್ಡ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಶಿವಾಚಾ ರ್ಯ ಮಹಾಸ್ವಾಮಿಗಳು, ಚೀಕಲಪರ್ವಿ ಶ್ರೀ ರುದ್ರಮುನೀಶ್ವರ ಮಠದ ಶ್ರೀ ಸದಾಶಿವ ಮಹಾಸ್ವಾಮಿಗಳು, ನವಲಕಲ್ ಸಂಸ್ಥಾನ ಬೃಹನ್ಮಠದ ಶ್ರೀ ಅಭಿನವ ಸೋಮನಾಥ ಶಿವಾಚಾರ್ಯ ಮಹಾಸ್ವಾಮಿಗಳು,ಅಡವಿಸಿದ್ದೇಶ್ವರಮಠದ ಶರೀ ಡಾ. ಅಮರಸಿದ್ದೇಶ್ವರ ಮಹಾಸ್ವಾಮಿಗಳು, ವಹಿಸಲಿದ್ದಾರೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕಲ್ಮಠ ಶ್ರೀ ವೀರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದಾರೆ. ಧಿಕ್ಸೂಚಿ ಭಾಷಣವನ್ನು ಹುಬ್ಬಳ್ಳಿ ನಿರಾಮಯ ಫೌಂಡೇಶನ್ ಸಂಸ್ಥಾಪಕರಾದ ಡಾ.ಮಲ್ಲಿಕಾರ್ಜುನ ಬಾಳಿಕಾಯಿ ನೀಡಲಿದ್ದಾರೆ. ಅದ್ದರಿಂದ ಹೆಚ್ಚಿನ ಸಂಖ್ಯೆಯುಲ್ಲಿ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಕೋರಿದರು.
ಅಖೀಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾ.ಅಧ್ಯಕ್ಷರಾದ ಅರುಣಚಂದಾ,ಹಿಂದೂಪರ ಸಂಘಟನೆಯ ವಿಜಯಕುಮಾರ ಇಭ್ರಮಾಪುರ್, ಹನುಮೇಶನಾಯಕ್ ಸದಾಪುರ್, ಶಿವಾರ್ಜುನ ನಾಯುಕ, ಗುರುರಾಜ ನಾಗಲಾಪುರ್,ಪ್ರತಾಪಗೌಡ ಹೀರಾ, ರವಿಕುಮಾರ, ಮಣಿ, ವೀರೇಶ, ಸುನೀಲ್ ಬೆಟ್ಟದೂರು ಸೇರಿದಂತೆ ಇನ್ನಿತರರು ಇದ್ದರು.

ಮೊದಲನೇ ಪುಟದಿಂದ

# ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಇಂಧನ ಸೆಸ್ ಹೆಚ್ಚಳಕ್ಕೆ ಮುಂದಾದ ಸರ್ಕಾರ..?!

**ಆದಾಯ ಖೋತಾ:** ಸರಕಾರದ ಸ್ವಂತ ತೆರಿಗೆ ಮೂಲಗಳಿಂದ ವಾರ್ಷಿಕ ಗುರಿಯಷ್ಟು ಆದಾಯ ಸಂಗ್ರಹವಾಗುವುದು ಕಷ್ಟಸಾಧ್ಯವೆನಿಸಿದೆ. ಗುರಿ ತಲುಪಲು ಮಾರ್ಚ್ ಅಂತ್ಯದೊಳಗೆ 48,306 ಕೋಟಿ ರೂ. ಸಂಗ್ರಹವಾಗಬೇಕಿದ್ದು, ಅಬಕಾರಿ ಇಲಾಖೆ ಹೊರತುಪಡಿಸಿ ಉಳಿದ ಮೂರು ಮೂಲಗಳಿಂದ ವಾರ್ಷಿಕ ಗುರಿ ಸಾಧನೆ ಅನುಮಾನವೆನಿಸಿದೆ.
ವಾಣಿಜ್ಯ ತೆರಿಗೆ, ಮುದ್ರಾಂಕ ಮತ್ತು ನೋಂದಣಿ, ಮೋಟಾರು ವಾಹನ ತೆರಿಗೆಯಿಂದ ಸುಮಾರು 15,000 ಕೋಟಿ ರೂ.ನಷ್ಟು ಆದಾಯ ಕೈತಪ್ಪುವ ಲಕ್ಷಣ ಕಾಣುತ್ತಿದೆ. ಇದು ಸರಕಾರದ ವೆಚ್ಚ, ಬಜೆಟ್ ಗಾತ್ರದ ಮೇಲೆ ಪರಿಣಾಮ ಬೀರಲಿದೆ. ಪ್ರಸಕ್ತ ಸಾಲಿನಲ್ಲಿ ಬಂಡವಾಳ ವೆಚ್ಚಕ್ಕೆ 83,200 ಕೋಟಿ ರೂ. ವಿನಿಯೋಗಿಸುವುದಾಗಿ ಸರಕಾರ ಹೇಳುತ್ತಿದ್ದರೂ ತೆರಿಗೆ ಆದಾಯ ತಗ್ಗಿದರೆ ಅಭಿವೃದ್ಧಿ ಯೋಜನೆಗಳಿಗೆ ಬಳಕೆಯಾಗುವ ಅನುದಾನ ಕಡಿತವಾಗಲಿದೆ.

ವಾಣಿಜ್ಯ ತೆರಿಗೆ ಮೂಲದಿಂದ ಜನವರಿ ಅಂತ್ಯದವರೆಗೆ 90,229 ಕೋಟಿ ರೂ. ಸಂಗ್ರಹವಾಗಿದೆ. ಜಿಎಸ್‌ಟಿಯಿಂದ 66,605 ಕೋಟಿ ರೂ., ಮಾರಾಟ ತೆರಿಗೆಯಿಂದ 22,387 ಕೋಟಿ ರೂ. ಹಾಗೂ ವೃತ್ತಿ ತೆರಿಗೆಯಿಂದ 1,236 ಕೋಟಿ ರೂ. ಬೊಕ್ಕಸಕ್ಕೆ ಬಂದಿದೆ. ಮುದ್ರಾಂಕ ಮತ್ತು ನೋಂದಣಿ ಶುಲ್ಕ ಸೇರಿದಂತೆ ಇತರ ಶುಲ್ಕ ರೂಪದಲ್ಲಿ 20,500 ಕೋಟಿ ರೂ. ಆದಾಯ ಗಳಿಸಿದೆ.
ಬಾಕಿ ಎರಡು ತಿಂಗಳಲ್ಲಿ 7,500 ಕೋಟಿ ರೂ. ಸಂಗ್ರಹ ಅಸಾಧ್ಯವೆನಿಸಿದ್ದು, 3,000 ಕೋಟಿ ರೂ.ನಷ್ಟು ಆದಾಯ ಕೈತಪ್ಪುವ ಸಾಧ್ಯತೆ ಇದೆ. ಮೋಟಾರು ವಾಹನ ತೆರಿಗೆ ಸೇರಿದಂತೆ ಇತರೆ ಮೂಲಗಳಿಂದ ಮಾರ್ಚ್ ಅಂತ್ಯಕ್ಕೆ 15,000 ಕೋಟಿ ರೂ. ಸಂಗ್ರಹ ಗುರಿ ನೀಡಲಾಗಿದೆ. ಆದರೆ ಜನವರಿವರೆಗೆ ಕೇವಲ 10,594 ಕೋಟಿ ರೂ. ಸಂಗ್ರಹವಾಗಿದೆ. ಇನ್ನು ಎರಡು ತಿಂಗಳಲ್ಲಿ4,406 ಕೋಟಿ ರೂ. ಗಳಿಸಬೇಕಿದೆ.
ಮಾರ್ಚ್ ಅಂತ್ಯಕ್ಕೆ 15,000 ಕೋಟಿ ರೂ. ಆದಾಯ ಸಂಗ್ರಹ ಸವಾಲಾಗಿದ್ದು, 13,000 ಕೋಟಿ ರೂ. ಆದಾಯ ಬರುವ ನಿರೀಕ್ಷೆ ಇದೆ. ಹಾಗಾಗಿ ವಾರ್ಷಿಕ ಗುರಿಯಲ್ಲಿ 2000 ಕೋಟಿ ರೂ. ನಷ್ಟು ಕೈತಪ್ಪುವ ಸಂಭವವಿದೆ ಎಂದು ಇಲಾಖೆ ಮೂಲಗಳು ಹೇಳಿವೆ.

# ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಗೆ ಸಮನ್ವಯದಿಂದ ಕಾರ್ಯ ನಿರ್ವಹಿಸಿ : ಪಾಟೀಲ



**ಔರಾದ್ :ಮಾ.3:** ಎಸ್ಸೆಸ್ಸೆಲ್ಸಿ ಫಲಿತಾಂಶ ಸುಧಾರಣೆಗೆ ಶಿಕ್ಷಕರು ಮತ್ತು ಪಾಲಕರು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ತಹಸೀಲ್ದಾರ್ ಮಹೇಶ ಪಾಟೀಲ್ ಹೇಳಿದರು.

ಪಟ್ಟಣದ ಆದರ್ಶ ವಿದ್ಯಾಲಯದಲ್ಲಿ ಸೋಮವಾರ ನಡೆದ ತಾಲೂಕಿನ ಪ್ರೌಢ ಶಾಲಾ ಮುಖ್ಯಗುರುಗಳ ಸಭೆಯಲ್ಲಿ ಮಾತನಾಡಿದ ಅವರು, ಎಸ್ಸೆಸ್ಸೆಲ್ಸಿ ಪರೀಕ್ಷೆಗಳು ಸಮೀಪಿಸುತ್ತಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳಲ್ಲಿ ಕಾಣಿಸಿಕೊಳ್ಳುವ ಆತಂಕ ಮತ್ತು ಭಯವನ್ನು ದೂರ ಮಾಡುವುದು ಅತ್ಯಂತ ಮುಖ್ಯವಾಗಿದೆ ಎಂದು ತಿಳಿಸಿದರು. ಪರೀಕ್ಷೆ ಎಂಬುದು ಜೀವನದ ಅಂತಿಮ ಗುರಿಯಲ್ಲ; ಅದು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವ ಒಂದು ಹಂತ ಮಾತ್ರ ಎಂಬ ಮನೋಭಾವವನ್ನು ಮಕ್ಕಳಲ್ಲಿ ಬೆಳೆಸಬೇಕು ಎಂದು ಹೇಳಿದರು.

ವಿದ್ಯಾರ್ಥಿಗಳಲ್ಲಿ ಆತ್ಮವಿಶ್ವಾಸವನ್ನು ಹೆಚ್ಚಿಸುವುದು, ಅವರ ಶಕ್ತಿಸಾಮರ್ಥ್ಯಗಳನ್ನು ಗುರುತಿಸಿ ಉತ್ತೇಜಿಸುವುದು ಶಿಕ್ಷಕರ ಮುಖ್ಯ ಕರ್ತವ್ಯವಾಗಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ವಿಭಿನ್ನ ಸಾಮರ್ಥ್ಯ ಹೊಂದಿರುತ್ತಾನೆ. ಶೇ. 40ರೊಳಗಿನ ಅಂಕಗಳನ್ನು ಪಡೆಯುವ ಅಥವಾ ಅನುತ್ತೀರ್ಣರಾಗುವ ಸಾಧ್ಯತೆ ಇರುವ ವಿದ್ಯಾರ್ಥಿಗಳನ್ನು ಗುರುತಿಸಿ, ಅವರಿಗೆ ವಿಶೇಷ ತರಗತಿಗಳು, ಮರುಪಾಠ ಮತ್ತು ವೈಯಕ್ತಿಕ ಮಾರ್ಗದರ್ಶನ ನೀಡಬೇಕು. ವಾರದ ಅವಧಿಯಲ್ಲಿ ಪ್ರಗತಿ ಪರಿಶೀಲನೆ ನಡೆಸಿ, ದುರ್ಬಲ ವಿಷಯಗಳ ಮೇಲೆ ಹೆಚ್ಚು ಗಮನ ಹರಿಸಬೇಕು ಎಂದು ಸೂಚಿಸಿದರು.
ತಾಪಂ ಇಒ ಕಿರಣ ಪಾಟೀಲ್ ಮಾತನಾಡಿ, ಜಿಪಂ ಸಿಇಒ ಅವರ ಮಾರ್ಗದರ್ಶನದಲ್ಲಿ ಫಲಿತಾಂಶ ಸುಧಾರಣೆಗೆ ಹಲವು ಯೋಜನೆಗಳನ್ನು ರೂಪಿಸಲಾಗಿದೆ. ಮಾದರಿ ಪರೀಕ್ಷೆಗಳ ಆಯೋಜನೆ, ವಿಷಯವಾರು ಕಾರ್ಯಾಗಾರಗಳು ಮತ್ತು ಶಿಕ್ಷಕರ ತರಬೇತಿ ಕಾರ್ಯಕ್ರಮಗಳು ನಡೆಯುತ್ತಿವೆ. ಈ ವರ್ಷ ಉತ್ತಮ ಸಾಧನೆ ಮಾಡುವ ಸಂಕಲ್ಪ ತೆಗೆದುಕೊಳ್ಳಬೇಕು ಎಂದು ಹೇಳಿದರು. ಪಾಲಕರ ಪಾತ್ರವೂ ಅತ್ಯಂತ ಮಹತ್ವದ್ದು. ಎಸ್ಸೆಸ್ಸೆಲ್ಸಿ ಫಲಿತಾಂಶ ಪ್ರಕಟವಾಗುವವರೆಗೆ ಮನೆಯಲ್ಲಿ ಟಿವಿ, ಮೊಬೈಲ್ ಮತ್ತು ಇತರೆ ಮನರಂಜನಾ ಸಾಧನಗಳ ಬಳಕೆಯನ್ನು ನಿಯಂತ್ರಿಸುವ ಮೂಲಕ ಮಕ್ಕಳ ಅಧ್ಯಯನದ ಕಡೆಗೆ ಹೆಚ್ಚು ಗಮನ ಹರಿಸಬೇಕು. ಮಕ್ಕಳೊಂದಿಗೆ ಸ್ನೇಹಪೂರ್ವಕವಾಗಿ ಮಾತನಾಡಿ, ಅವರ ಸಂದೇಹಗಳನ್ನು ಕೇಳಿ ಪರಿಹರಿಸಬೇಕು. ಒತ್ತಡವನ್ನು ಹೆಚ್ಚಿಸುವ ಬದಲು ಪ್ರೋತ್ಸಾಹದ ಮಾತುಗಳ ಮೂಲಕ ಆತ್ಮಸ್ಥೈರ್ಯ ತುಂಬಬೇಕು ಎಂದು ತಿಳಿಸಿದರು.
ಈ ವೇಳೆ ಸಭೆಯಲ್ಲಿ ನಾನಾ ಶಾಲೆಗಳ ಮುಖ್ಯಗುರುಗಳು ತಮ್ಮ ಶಾಲೆಗಳಲ್ಲಿ ಕೈಗೊಂಡಿರುವ ಕ್ರಮಗಳನ್ನು ಹಂಚಿಕೊಂಡರು. ಕೆಲವರು ಬೆಳಿಗ್ಗೆ ಮತ್ತು ಸಂಜೆ ವಿಶೇಷ ತರಗತಿಗಳನ್ನು ನಡೆಸುತ್ತಿರುವುದಾಗಿ ತಿಳಿಸಿದರೆ, ಇನ್ನು ಕೆಲವರು ಪೋಷಕರ ಸಭೆಗಳ ಮೂಲಕ ಜಾಗೃತಿ ಮೂಡಿಸುತ್ತಿರುವುದಾಗಿ ಹೇಳಿದರು. ಎಸ್ಸೆಸ್ಸೆಲ್ಸಿ ಫಲಿತಾಂಶವನ್ನು ಉತ್ತಮ ಸ್ಥಾನಕ್ಕೆ ತರುವ ಉದ್ದೇಶದಿಂದ ಎಲ್ಲರೂ ಸಮನ್ವಯದಿಂದ ಕೆಲಸ ಮಾಡುವಂತೆ ಅಧಿಕಾರಿಗಳು ಕರೆ ನೀಡಿದರು.
ವಿದ್ಯಾರ್ಥಿಗಳ ಪರಿಶ್ರಮ, ಶಿಕ್ಷಕರ ಮಾರ್ಗದರ್ಶನ ಮತ್ತು ಪಾಲಕರ ಸಹಕಾರ ಒಟ್ಟುಗೂಡಿದರೆ ಉತ್ತಮ ಫಲಿತಾಂಶ ಸಾಧಿಸುವುದು ಸಾಧ್ಯವೆಂದು ಸಭೆಯಲ್ಲಿ ವಿಶ್ವಾಸ ವ್ಯಕ್ತವಾಯಿತು. ಬಿಇಒ ಬಿಜಿ ರಂಗೇಶ, ರಾಜಕುಮಾರ, ಸುನಿಲ ವಾಘಮಾರೆ ಸೇರಿದಂತೆ ಇತರರಿದ್ದರು.
ಬಾಲ್ಯವಿವಾಹ ಸುಳಿವು ಕಂಡಲ್ಲಿ ಅಧಿಕಾರಿಗಳ ಗಮನಕ್ಕೆ ತನ್ನಿ

**ಶಾಲೆಗೆ ಬರುವ ಮಕ್ಕಳ ಸ್ಥಿತಿ**-ಪರಿಸ್ಥಿತಿಗಳ ಬಗ್ಗೆ ಶಿಕ್ಷಕರಿಗೆ ಸಮಗ್ರ ಮಾಹಿತಿ ಇರುತ್ತದೆ. ಬಾಲ್ಯ ವಿವಾಹ ನಡೆಯುವ ಸುಳಿವು ದೊರೆತರೂ ಅದನ್ನು ಮುಚ್ಚಿಡದೆ ತಕ್ಷಣ ಸಂಬಂಧಿತ ಅಧಿಕಾರಿಗಳ ಗಮನಕ್ಕೆ ತರಬೇಕು ಎಂದು ತಾಲ್ಲೂಕು ವೈದ್ಯಾಧಿಕಾರಿ ಡಾ. ಗಾಯತ್ರಿ ತಿಳಿಸಿದರು. ಮಕ್ಕಳ ಭವಿಷ್ಯ ಹಾಳಾಗದಂತೆ ಕಾನೂನುಬದ್ಧ ಕ್ರಮ ಕೈಗೊಳ್ಳುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

**ಬಿಸಿಯೂಟಕ್ಕೆ ಕಟ್ಟುನಿಟ್ಟಿನ ನಿಗಾ ವಹಿಸಿ**-ತಾಲೂಕಿನ ಶಾಲೆಗಳಲ್ಲಿ ಬಿಸಿಯೂಟ ವಿತರಣೆಯಲ್ಲಿ ಯಾವುದೇ ಸಮಸ್ಯೆ ಉಂಟಾಗದಂತೆ ಮುಖ್ಯಗುರುಗಳು ಜಾಗ್ರತೆ ವಹಿಸಬೇಕು ಎಂದು ತಹಸೀಲ್ದಾರ್ ಮಹೇಶ ಪಾಟೀಲ್ ಹಾಗೂ ಇಒ ಕಿರಣ ಪಾಟೀಲ್ ಸೂಚಿಸಿದರು. ತಾಲೂಕಿನ ಜಮಾಲಪುರ ಶಾಲೆಯಲ್ಲಿ ನಡೆದ ಘಟನೆಯಂತೆ ಮರುಕಳಿಸದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಆಹಾರದ ಗುಣಮಟ್ಟ, ಸ್ವಚ್ಛತೆ ಹಾಗೂ ಸಂಗ್ರಹಣೆ ಕ್ರಮಗಳನ್ನು ನಿಯಮಿತವಾಗಿ ಪರಿಶೀಲಿಸಿ, ಯಾವುದೇ ದೂರುಗಳು ಬಂದಲ್ಲಿ ತಕ್ಷಣ ಸಂಬಂಧಿತ ಅಧಿಕಾರಿಗಳಿಗೆ ಪತ್ರ ಬರೆದು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಲಾಗಿದೆ.

## ರೈತರು ನೈಸರ್ಗಿಕ ಕೃಷಿ ಪದ್ಧತಿಯ ಮೂಲಕ ಬದುಕ ಬೇಕು :ನೀಲಂ ಪಟೇಲ್

**ಕಮಲನಗರ:ಮಾ.3:**ತಾಲೂಕಿನ ಡೋಣಗಾಂವ(ಎಮ್) ಗ್ರಾಮದ ಪ್ರಗತಿಪರ ರೈತ ಬಾಬುರಾವ ಸೋಮುರೆ ಅವರು ಇತೀಚಿಗೆ ನಡೆದ ಗುಜರಾತ ರಾಜ್ಯದ ಭುಜ ಪಟ್ಟಣದಲ್ಲಿ ನಡೆದ ಎರಡು ದಿನಗಳ ರಾಷ್ಟ್ರೀಯ ಮಟ್ಟದ ನ್ಯಾಚುರಲ್ ಫಾಮಿರ್‌ಂಗ್ ಕಾರ್ಯಾಗಾರದಲ್ಲಿ ಪಾಲ್ಗೊಂಡಿದ್ದರು. ಈ ಕಾರ್ಯ ಉತ್ಸಾಹಭರಿತವಾಗಿ ನೆರವೇರಿತು.
ದೇಶದ ಎಲ್ಲಾ ರಾಜ್ಯಗಳಿಂದ ರೈತ ಪ್ರತಿನಿಧಿಗಳು, ಕೃಷಿ ತಜ್ಞರು ಹಾಗೂ ಅಧಿಕಾರಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.
ಈ ಕಾರ್ಯಾಗಾರವನ್ನು ನೀತಿ ಆಯೋಗ ಅವರ ಮಾರ್ಗದರ್ಶನದಲ್ಲಿ ಆಯೋಜಿಸಲಾಗಿತ್ತು.
ನೀತಿ ಆಯೋಗದ ಮುಖ್ಯ ಸಲಹೆಗಾರ್ತಿ ನೀಲಂ ಪಟೇಲ್ ಅವರ ನ್ಯಾಚುರಲ್ ಫಾಮಿರ್‌ಂನ ಐದು ಪ್ರಮುಖ ತತ್ವಗಳನ್ನು ವಿವರವಾಗಿ ತಿಳಿಸಲಾಯಿತು. ಅದರಲ್ಲಿ ಬೀಜಾಮೃತ, ಜೀವಾಮೃತ, ಮಲ್ಚಿಂಗ್ (ಆವರಣೆ), ವಾಫ್ಸಾ ಮತ್ತು ಸ್ವಾಭಾವಿಕ ಕೀಟ ನಿಯಂತ್ರಣ ಬ್ರಹ್ಮಾಸ್ತ್ರ ಇತ್ಯಾದಿ) ತತ್ವಗಳು ಒಳಗೊಂಡಿದವು. ದೇಶಿ ಹಸುವಿನ ಆಧಾರಿತ ಕೃಷಿ, ಉತ್ಪಾದನಾ ವೆಚ್ಚದಲ್ಲಿ ಕಡಿತ, ಮಣ್ಣಿನ ಸಸ್ಯೋತ್ಪಾದಕತೆ ಹೆಚ್ಚಿಸುವುದು ಹಾಗೂ ರಾಸಾಯನಿಕರಹಿತ ಆಹಾರ ಉತ್ಪಾದನೆ ಕುರಿತು ತಜ್ಞರು ಮಾರ್ಗದರ್ಶನ ನೀಡಿದರು.ಶಾಶ್ವತ ಕೃಷಿ ಮತ್ತು ಆತ್ಮನಿರ್ಭರ ಭಾರತದ ದಿಸೆಯಲ್ಲಿ ನ್ಯಾಚುರಲ್ ಫಾಮಿರ್‌ಂಗ್ ಮಹತ್ವದ ಪಾತ್ರ ವಹಿಸಲಿದೆ ಎಂದು ತಿಳಿಸಿದರು.ಈ ಕಾರ್ಯಾಗಾರದಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಗ್ರಾಮೀಣ ಕೃಷಿ ಅಭಿವೃದ್ಧಿ ಮತ್ತು ಸಂಶೋಧನಾ ಸಂಸ್ಥೆ ಅಧ್ಯಕ್ಷ ಶ್ರೀ ಬಾಬುರಾವ್ ಸೋಮೂರೆ (ಕಮಲನಗರ್, ಜಿ. ಬೀದರ) ಭಾಗವಹಿಸಿದರು. ಅವರು ಕಮಲನಗರ್ ತಾಲ್ಲೂಕು ಕೃಷಿ ಅಧಿಕಾರಿ ಶತ್ರುಘ್ನ ಮಾರ್ಗದರ್ಶನ ಹಾಗೂ ಶ್ರೀ ಸಾಹೇಬರ ಮಾರ್ಗದರ್ಶನದಲ್ಲಿ ಈ ರಾಷ್ಟ್ರೀಯ ಕಾರ್ಯಾಗಾರದಲ್ಲಿ ಹಾಜರಿದ್ದರು. ಕಾರ್ಯಾಗಾರದಲ್ಲಿ ಅವರು ಸಕ್ರಿಯವಾಗಿ ಪಾಲ್ಗೊಂಡು ವಿವಿಧ ರಾಜ್ಯಗಳ ರೈತರೊಂದಿಗೆ ಸಂವಾದ ನಡೆಸಿದರು. ಭುನಲ್ಲಿ ನಡೆದ ಈ ರಾಷ್ಟ್ರೀಯ ಕಾರ್ಯಾಗಾರದಿಂದ ಪ್ರೇರಣೆ ಪಡೆದು ಕಮಲನಗರ್ ತಾಲ್ಲೂಕಿನ ರೈತರಿಗೆ ಶೀಘ್ರದಲ್ಲೇ ಮಾರ್ಗದರ್ಶನ ಶಿಬಿರ, ಪ್ರಾತ್ಯಕ್ಷಿಕೆ ಹಾಗೂ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಶ್ರೀ ಸೋಮೂರೆ ತಿಳಿಸಿದ್ದಾರೆ.ನ್ಯಾಚುರಲ್ ಫಾಮಿರ್‌ಂಗ್ ಮೂಲಕ ರೈತರ ಆದಾಯ ಹೆಚ್ಚಿಸುವುದು, ಉತ್ಪಾದನಾ ವೆಚ್ಚ ಕಡಿಮೆ ಮಾಡುವುದು ಹಾಗೂ ಶಾಶ್ವತ ಕೃಷಿಗೆ ಉತ್ತೇಜನ ನೀಡುವುದು ಸಂಸ್ಥೆಯ ಮುಖ್ಯ ಉದ್ದೇಶವಾಗಿದೆ ಎಂದರು.
ರಾಷ್ಟ್ರೀಯ ಮಟ್ಟದ ಈ ಕಾರ್ಯಾಗಾರದಿಂದ ಕಮಲನಗರ್ ತಾಲ್ಲೂಕಿನವರಿಗೆ ಗೌರವ ಹೆಚ್ಚಿದ್ದು, ಅಲ್ಲದೇ ಸ್ಥಳೀಯ ರೈತರಲ್ಲಿ ಉತ್ಸಾಹದ ವಾತಾವರಣ ನಿರ್ಮಾಣವಾಗಿದೆ ಎಂದೇ ಹೇಳಬಹುದು.

# ದುಬೈನಲ್ಲಿ ಸಿಲುಕಿದ್ದ 213 ಕನ್ನಡಿಗರು ಸುರಕ್ಷಿತವಾಗಿ ವಾಪಸ್

**ಬೆಂಗಳೂರು, ಮಾ.3-** ಅಮೆರಿಕ-ಇಸ್ರೆಲ್ ದಾಳಿ ಹಿನ್ನೆಲೆಯಲ್ಲಿ ಇರಾನ್ ಪರಿಸ್ಥಿತಿ ತೀವ್ರ ಉದ್ವಿಗ್ನಗೊಂಡು ವಾಯುಪ್ರದೇಶ ಮುಚ್ಚಲ್ಪಟ್ಟ ಕಾರಣ ಅಬುಧಾಬಿಯಲ್ಲಿ ಸಿಲುಕಿದ್ದ ಸುಮಾರು 213 ಕನ್ನಡಿಗರು ನಿನ್ನೆ ರಾತ್ರಿ ಸುರಕ್ಷಿತವಾಗಿ ಬೆಂಗಳೂರಿಗೆ ವಾಪಸ್ಸಾಗಿದ್ದಾರೆ.

ವಿಧಾನಪರಿಷತ್ ಸದಸ್ಯ ಭೋಜೇಗೌಡ ಹಾಗೂ ಒಲಿಂಪಿಕ್ ಪದಕ ವಿಜೇತೆ, ಖ್ಯಾತ ಬ್ಯಾಡಿಂಟನ್ ತಾರೆ ಪಿ.ವಿ. ಸಿಂಧು ಕೂಡ ಸೇರಿದ್ದಾರೆ. ದುಬೈನಿಂದ ನಿನ್ನೆ ರಾತ್ರಿ ಹೊರಟ ವಿಮಾನ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ಬಳಿಯ ಕೆಂಪೇಗೌಡ ಅಂತಾರಾಷ್ಟ್ರಿಯ ವಿಮಾನ ನಿಲ್ದಾಣಕ್ಕೆ ಬಂದಿಳಿಯಿತು. ಸಾವು-ಬದುಕಿನ ನಡುವೆ ಆತಂಕದಲ್ಲೆ ಕ್ಷಣಗಳನ್ನು ಕಳೆದಿದ್ದ ಬಹುತೇಕರು ತಾಯ್ನಾಡಿಗೆ ಬರುತ್ತಿದ್ದಂತೆ ಮುಖದಲ್ಲಿ ನಗು ಎದ್ದು ಕಾಣುತ್ತಿತ್ತು.
ದುಬೈನಿಂದ ಎರಡು ಫ್ಲೈಟ್‌ಗಳು ಬೆಂಗಳೂರಿಗೆ ಬಂದಿಳಿದಿದ್ದು, 300ಕ್ಕೂ ಹೆಚ್ಚು ಮಂದಿ ವಾಪಸ್ ಆಗಿದ್ದಾರೆ. ಬೆಳಗಿನ ಜಾವ 3 ಗಂಟೆ ಸುಮಾರಿಗೆ ಮತ್ತೊಂದು ವಿಮಾನ ಕೆಂಪೇಗೌಡ ಅಂತಾರಾಷ್ಟ್ರಿಯ ವಿಮಾನ ನಿಲ್ದಾಣ ತಲುಪಿತ್ತು. ವ್ಯಾಪಾರ, ಪ್ರವಾಸ ಅಥವಾ ಕೆಲಸದ ನಿಮಿತ್ತ ಅಬುಧಾಬಿಗೆ ತೆರಳಿದ್ದ ಹಲವರು ಅಲ್ಲಿ ಸಿಲುಕಿಕೊಂಡಿದ್ದರು.

ದುಬೈನಿಂದ ಬೆಂಗಳೂರಿಗೆ ವಾಪಸ್ಸಾದ ಬಳಿಕ ಮಾತಾಡಿದ ವಿಧಾನಪರಿಷತ್ ಸದಸ್ಯ ಭೋಜೇಗೌಡ ಅವರು, ನಾನು ದಕ್ಷಿಣ ಆಫ್ರಿಕಾಗೆ ಹೋಗಿದ್ದೆ. ಕಾರಣಾಂತರಗಳಿಂದ ವಾಪಸ್ ಬರುವುದಕ್ಕೆ ಮುಂದಾಗಿದ್ದೆ. ದುಬೈ ಮೂಲಕ ಇಂಡಿಯಾಗೆ ಬರಬೇಕಾಗಿತ್ತು. ಆ ಸಮಯದಲ್ಲಿ ಫ್ಲೈಟ್ ತಡವಾಯಿತು. ಯಾಕೆ ಎಂದು ವಿಚಾರಿಸಿದಾಗ ಅಬುಧಾಬಿಯಲ್ಲಿ ಬಾಂಬ್ ದಾಳಿಯಾಗುತ್ತಿದೆ ಎಂದು ಹೇಳಿ ಸ್ವಲ್ಪ ಹೊತ್ತಿನ ನಂತರ ಫ್ಲೈಟ್‌ನಿಂದಲೇ ಇಳಿಸಿದರು ಎಂದು ಮಾಹಿತಿ ನೀಡಿದ್ದಾರೆ.

ಎಲ್ಲಾ ವಿಮಾನಗಳನ್ನು ಇದ್ದಕ್ಕಿದ್ದಂತೆ ತಡೆಹಿಡಿದರು. ಅಲ್ಲಿ ದುಬೈ ವೀಸಾ ಇರಲಿಲ್ಲ, ವೀಸಾ ಪಡೆದುಕೊಂಡೆ. ಬಳಿಕ ಕೇಂದ್ರ ಸಚಿವ ಕುಮಾರಸ್ವಾಮಿ ಅವರ ಕಡೆಯಿಂದ ಅಲ್ಲೆ ಹೋಟೆಲ್ ವ್ಯವಸ್ಥೆ ಆಯ್ತು. ಹೋಟೆಲ್ ಅಕ್ಕಪಕ್ಕದಲ್ಲಿ ಬಾಂಬಿಂಗ್ ಆಗ್ತಿತ್ತು. ನಂತರ ನಮನ್ನ ಸುರಕ್ಷಿತ ಸ್ಥಳವೊಂದರಲ್ಲಿ ಇರಿಸಿದರು.ನಂತರ ನಮ ಸ್ನೆಹಿತರೊಬ್ಬರ ಮನೆಗೆ ಹೋಗಿದ್ದೆ. ಈ ವೇಳೆ ಸಚಿವರಾದ ಹೆಚ್‌ಕೆ ಪಾಟೀಲ್ ಹಾಗೂ ಕೃಷ್ಣ ಭೈರೇಗೌಡ ಅವರು ಕೂಡ ನಮನ್ನ ಸಂಪರ್ಕಿಸಿದರು. ಫೋನ್‌ನಲ್ಲಿ ಮಾತಾಡುವಾಗಲೂ ಮೂರು ಮಿಸ್ಸೈಲ್‌ಗಳು ಬಿದ್ದಿವೆ. ಬುರ್ಜ್ ಖಲೀಫಾ ಪಕ್ಕದಲ್ಲೆ ಬಾಂಬ್ ಬಿತ್ತು.
ಇವತ್ತು ಬೆಳಗ್ಗೆ ಕೂಡ ಬಾಂಬ್‌ಗಳು ಬೀಳುತ್ತಲೇ ಇದ್ದವು. ಮೂರು ಬಾಂಬ್‌ಗಳು ಬೀಳೋದನ್ನ ನಾನು ನೋಡಿದೆ ಎಂದು ಅಲ್ಲಿನ ಪರಿಸ್ಥಿತಿಯನ್ನು ವಿವರಿಸಿದರು. ಹೇಗೋ ನಮ ಹಾಗೂ ದುಬೈ ಸರ್ಕಾರ ಮಾತಾಡಿಕೊಂಡು ಅಲ್ಲಿಂದ ರೂಟ್ ಚೇಂಜ್ ಮಾಡಿ ನಮನ್ನ ವಾಪಸ್ ಕಳುಹಿಸಲಾಗಿದೆ.

ದುಬೈನಲ್ಲಿ ಯುದ್ಧದ ವಾತಾವರಣ ಹೆಚ್ಚಿದೆ. ಇಷ್ಟು ಬೇಗ ಬರುತ್ತೇನೆ ಅಂದ್ಕೊಂಡಿರಲಿಲ್ಲ. ಕಠಿಣ ಸಮಯದಲ್ಲಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಅವರು ದೂರವಾಣಿ ಮೂಲಕ ಸಂಪರ್ಕಿಸಿ ಧೈರ್ಯ ತುಂಬಿದ್ದಲ್ಲದೆ, ದುಬೈನಲ್ಲಿ ಸುರಕ್ಷಿತ ಹೋಟೆಲ್ ವಾಸ್ತವ್ಯಕ್ಕೆ ವ್ಯವಸ್ಥೆ ಮಾಡಿಸಿದ್ದರು. ಆದಾಗ್ಯೂ ಭದ್ರತೆಯ ಆತಂಕ ನಮನ್ನು ಕಾಡುತ್ತಲೇ ಇತ್ತು ಎಂದು ಭೋಜೇಗೌಡರು ತಿಳಿಸಿದರು.



ದುಬೈಗೆ ಪ್ರವಾಸಕ್ಕೆಂದು ತೆರಳಿದ್ದ ಗೌತಮ್ ಅಲ್ಲಿನ ಯುದ್ಧ ಭೀಕರತೆ ಬಗ್ಗೆ ಮಾತಾಡಿದ್ದಾರೆ. ನಾವು ಟ್ರಿಪ್‌ಗೆಂದು ದುಬೈಗೆ ಹೋಗಿದ್ವಿ. ಆದರೆ ಅಲ್ಲಿ ಯುದ್ಧ ಆರಂಭವಾಯ್ತು, ಮಿಸ್ಸೈಲ್‌ಗಳು ಕಣ್ಣ ಮುಂದೆಯೇ ಕಾಣಿಸ್ತಿದ್ವು. ಭಯ ಆಗ್ತಿತ್ತು, ನಮ್ ದೇಶಕ್ಕೆ ಹೋದ್ರೆ ಸಾಕು ಅನ್ನಿಸಿತ್ತು. ನಾವಿರುವ ಜಾಗದಿಂದ ಸ್ವಲ್ಪ ದೂರದಲ್ಲಿ ಮಿಸ್ಸೈಲ್‌ಗಳು ಬೀಳ್ತಿದ್ವು. ನಾವು ನಾಲ್ಕನೇ ತಾರೀಖು ವಾಪಸ್ ಬರಬೇಕಿತ್ತು. ಆದರೆ, ಯುದ್ಧ ಹಿನ್ನೆಲೆ ಬೇಗ ವಾಪಸ್ ಬಂದೆವು. ನಾವು ಬಂದಿದ್ದು ಖುಷಿಯಾಗಿದೆ. ಆದರೆ, ನಮ ಸ್ನೆಹಿತರು ಅಲ್ಲೆ ಸಿಕ್ಕಿಬಿದ್ದಾರೆ. ಅಲ್ಲಿನ ಸರ್ಕಾರ ನಮಗೆ ಸಹಕಾರ ನೀಡಿತ್ತು. ಇಂಡಿಯನ್ ಎಂಬೆಸ್ಸಿಯವರು ಸಹಕಾರ ನೀಡಿದರು ಎಂದು ಗೌತಮ್ ಹೇಳಿದ್ದಾರೆ.

ನಾನು ದುಬೈ ವಿಮಾನ ನಿಲ್ದಾಣ ತಲುಪಿದಾಗಲೇ ಅಲ್ಲಿನ ಗಂಭೀರ ಪರಿಸ್ಥಿತಿ ಅರಿವಿಗೆ ಬಂತು. ಮೊದಲು ವಿಮಾನ ಹೊರಡುವುದು ವಿಳಂಬವಾಗಿದೆ ಎಂದು ತಿಳಿಸಿದರು, ಸ್ವಲ್ಪ ಸಮಯದ ನಂತರ ವಿಮಾನವೇ ರದ್ದಾಗಿದೆ ಎಂಬ ಆಘಾತಕಾರಿ ಮಾಹಿತಿ ನೀಡಿದರು. ವಿಮಾನ ನಿಲ್ದಾಣದಲ್ಲಿ ಕಾಲಿಡಲು ಜಾಗವಿಲ್ಲದಷ್ಟು ಜನಸಂದಣಿ ಸೇರಿತ್ತು. ಎಲ್ಲರ ಮುಖದಲ್ಲೂ ಯುದ್ಧದ ಭಯ ಎದ್ದು ಕಾಣುತ್ತಿತ್ತು ಎಂದು ಆತಂಕದ ಕ್ಷಣಗಳನ್ನು ಮೆಲುಕು ಹಾಕಿದರು.
ಕೆಂಪೇಜಗೌಡ ಅಂತರರಾಷ್ಟ್ರಿಯ ವಿಮಾನ ನಿಲ್ದಾಣದ ವಕ್ತಾರರ ಪ್ರಕಾರ, ವಿಮಾನದ 238/239 ಸೋಮವಾರ ರಾತ್ರಿ ಸುಮಾರು 10 ಗಂಟೆಗೆ ಬೆಂಗಳೂರು ತಲುಪಿತು. ವಿಮಾನ ಮರಳಿ ಅಬುಧಾಬಿಗೆ ರಾತ್ರಿ 11.10ಕ್ಕೆ ಪ್ರಯಾಣ ಬೆಳೆಸಿತು ಎಂದು ತಿಳಿಸಿದ್ದಾರೆ.

ಇನ್ನೊಂದೆಡೆ ಎಮಿರೆಟ್ ಸಂಸ್ಥೆಯ ಏರ್ಬಸ್ 380 ವಿಮಾನ ಮಂಗಳವಾರ ಮುಂಜಾನೆ ಕಾರ್ಯಾಚರಿಸಲು ನಿಗದಿಯಾಗಿದೆ. ಬೆಳಗಿನ 2.40ಕ್ಕೆ ಆಗಮನ ಹಾಗೂ 4.30ಕ್ಕೆ ಹೊರಡಲು ವೇಳಾಪಟ್ಟಿ ನಿಗದಿಯಾಗಿದೆ. ದುಬೈಗೆ ತೆರಳುವ ಪ್ರಯಾಣಿಕರಿಗೆ ಯುಎಇ ನಾಗರಿಕರು ಮತ್ತು ನಿವಾಸಿ ಪರವಾನಗಿ ಹೊಂದಿದವರಿಗೆ ಮಾತ್ರ ಅವಕಾಶ ನೀಡಲಾಗಿದೆ. ಪ್ರದೇಶದ ಪ್ರಸ್ತುತ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಅಗತ್ಯ ನಿರ್ಬಂಧಗಳೊಂದಿಗೆ ವಿಮಾನ ಕಾರ್ಯಾಚರಣೆ ನಡೆಸಲಾಗುತ್ತಿದೆ ಎಂದು ವಿಮಾನ ನಿಲ್ದಾಣ ಅಧಿಕಾರಿಗಳು ತಿಳಿಸಿದ್ದಾರೆ.
ಇದೂವರೆಗೂ ಅಬುಧಾಬಿ ವಿಮಾನ ನಿಲ್ದಾಣದಲ್ಲಿ ಸಿಲುಕಿದ್ದ ಬೆಂಗಳೂರು ನಿವಾಸಿ ಅನಿರುದ್ಧ ಅವರು ಕೂಡ ಸುರಕ್ಷಿತವಾಗಿ ಮನೆಗೆ ವಾಪಸ್ಸಾಗಿದ್ದಾರೆ. ವಿವಾಹ ಸಮಾರಂಭಕ್ಕಾಗಿ ಕೆನಡಾದಿಂದ ಭಾರತಕ್ಕೆ ಬರುತ್ತಿದ್ದ ವೇಳೆ ಅಬುಧಾಬಿಯಲ್ಲಿ ಪ್ರಯಾಣ ವ್ಯತ್ಯಯದಿಂದ ಸಿಲುಕಿಕೊಂಡಿದ್ದರು.

## ಇಂಗ್ಲಿಷ್ ವಿಷಯದ ಪರೀಕ್ಷೆಗೆ 1,214 ವಿದ್ಯಾರ್ಥಿಗಳು ಗೈರು

**ರಾಯಚೂರು ಮಾ,3**-ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಳಿಯಿಂದ 2026ರ ಮಾರ್ಚ್ 03ರ ಮಂಗಳವಾರ ನಡೆದ ದ್ವಿತೀಯ ಪಿಯುಸಿ ಇಂಗ್ಲೀಷ್ ವಿಷಯದ ಪರೀಕ್ಷೆಗೆ ಒಟ್ಟು 1,214 ವಿದ್ಯಾರ್ಥಿಗಳು ಗೈರು ಹಾಜರಿಯಾಗಿದ್ದಾರೆ.

ಜಿಲ್ಲೆಯ 43 ಪರೀಕ್ಷೆ ಕೇಂದ್ರಗಳಲ್ಲಿ ಇಂಗ್ಲೀಷ್ ವಿಷಯದಲ್ಲಿ ಒಟ್ಟು 20,540 ನೋಂದಣಿಯಾಗಿದ್ದು, 19,326 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಸೋಮಶೇಖರಪ್ಪ ಹೊಕ್ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಲಿಂಗಸುಗೂರು ಕೃಷಿ ಇಲಾಖೆಗೆ ವಾಹನ ಒದಗಿಸಲು ಅರ್ಜಿ

**ರಾಯಚೂರು ಮಾ,3-** ಜಿಲ್ಲೆಯ ಲಿಂಗಸುಗೂರು ಉಪ ಕೃಷಿ ನಿರ್ದೇಶಕರು-2ರ ಕಾರ್ಯಾಲಯದ ಸರಕಾರಿ ಕೆಲಸ ಕಾರ್ಯಗಳಿಗೆ ನಾಲ್ಕು ಚಕ್ರದ ಹವಾ ನಿಯಂತ್ರಿತ ವಾಹನವನ್ನು ಬಾಡಿಗೆ ಆಧಾರದ ಒದಗಿಸಲು ಅರ್ಹ ಸಂಸ್ಥೆ ಅಥವಾ ಮಾಲೀಕರಿಂದ ಅರ್ಜಿ ಆಹ್ವಾನಿಸಲಾಗಿದೆ.

ವಾಹನವು ಮಾಸಿಕ 2500.ಕಿ.ಮೀ. ಅಥವಾ 300 ಘಂಟೆಗಳಿಗೆ 40,000 ರೂ.(ಹವಾ ನಿಯಂತ್ರಿತ ವಾಹನಕ್ಕೆ) ಗರಿಷ್ಟ ಬಾಡಿಗೆ ಆಗಿರುತ್ತದೆ. ದಿನಾಂಕ:-01-04-2026 ರಿಂದ 31-03-2027 ಅವಧಿಗೆ ಒಂದು ಬೊಲೆರೊ/ ಶಿಪ್ಟಡಿಸೈರ್/ ಎರಿಟಿಗಾ ವಾಹನವನ್ನು (ಎಸಿ) ಅಧಿಕೃತ ಸರಕಾರಿ ಕೆಲಸಗಳಿಗಾಗಿ ಬೇಕಾಗಿದೆ. ಆಸಕ್ತ ವಾಹನಗಳ ಮಾಲೀಕರು ಮಾರ್ಚ್ 13ರೊಳಗಾಗಿ ನಿಗಧಿತ ನಮೂನೆ ಅರ್ಜಿಯನ್ನು ಪಡೆದು, ಮಾರ್ಚ್ 25ರ ಸಂಜೆ 5.30ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಲಿಂಗಸುಗೂರಿನ ಉಪ ಕೃಷಿ ನಿರ್ದೇಶಕರು-2ರ ಕಾರ್ಯಾಲಯವನ್ನು ಕಚೇರಿಯ ವೇಳೆಯಲ್ಲಿ ಭೇಟಿ ನೀಡಬಹುದಾಗಿದೆ. ಅಥವಾ ದೂರವಾಣಿ ಸಂಖ್ಯೆ: 08537-258600ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಲಿಂಗಸುಗೂರಿನ ಉಪ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಕವನ
## ಹೋಳಿ



ಹೋಳಿಯ ಬಣ್ಣಗಳು
ಹಳದಿ ಸಂಭ್ರಮದ ಬಣ್ಣಗಳು
ಹಸಿರು ಸಮೃದ್ಧಿಯ ಬಣ್ಣಗಳು
ಕೇಸರಿ ನೇರಳೆ ಕೆಂಪು ನೀಲಿ ಬಣ್ಣಗಳು
ಈ ರಂಗು ರಂಗಿನ ಬಣ್ಣಗಳು
ರಂಗು ರಂಗಿನ ರಂಗೋಲಿಯಂತೆ
ರಂಗು ರಂಗಿನ ಕಾಮನಬಿಲ್ಲಿನಂತೆ
ಈ ಎಲ್ಲಾ ಬಣ್ಣ ಬಣ್ಣಗಳ ಹಬ್ಬ ಹೋಳಿ
ಬಣ್ಣ ತುಂಬುವ ಹಬ್ಬ ಹೋಳಿ
ಬಕೇಟ್ ನೀರಲಿ ಬಣ್ಣವು ತುಂಬಿಸಿ
ಬಣ್ಣದ ಹೋಳಿಯ ರಂಗು ಎರಚಿ
ರಂಗು ರಂಗಿನ ಬಣ್ಣಗಳಲ್ಲಿ
ನಮ್ಮ ಜೀವನ ರಂಗಾಗಿರಲ್ಲಿ
ಈ ಬಣ್ಣದ ಹೋಳಿಯ ಹಬ್ಬ
ಹೊಸ ಚೈತನ್ಯ ತುಂಬಿ ಬರಲ್ಲಿ
ಬಣ್ಣ ಬಣ್ಣದ ಕನಸುಗಳು ಹೊತ್ತು ತರಲಿ



– ವಿ.ಎಂ.ಎಸ್.ಗೋಪಿ
ಲೇಖಕರು
ಬೆಂಗಳೂರು

## ಜೆಸ್ಕಾಂ ಗ್ರಾಹಕರ ಕುಂದು ಕೊರತೆ ತ್ರೈಮಾಸಿಕ ಸಭೆ

**ರಾಯಚೂರು ಮಾ,3-** ರಾಯಚೂರು ಜಿಲ್ಲೆಯ ಎಲ್ಲಾ ತಾಲ್ಲೂಕಿನ ಜೆಸ್ಕಾಂ ಉಪ ವಿಭಾಗಳಲ್ಲಿ ಗ್ರಾಹಕರ ಕುಂದು ಕೊರೆತೆ ತ್ರೈಮಾಸಿಕ ಸಭೆಯನ್ನು ಕಾರ್ಯ ಮತ್ತು ಪಾಲನೆ ವೃತ್ತ ಅಧೀಕ್ಷಕ ಅಭಿಯಂತರರು ಇವರ ಅಧ್ಯಕ್ಷತೆಯಲ್ಲಿ ವಿವಿಧ ದಿನಾಂಕದಂದು ನಿಗದಿಪಡಿಸಲಾಗಿದೆ.ಮಾರ್ಚ್ 5ರ ಬೆಳಿಗ್ಗೆ 10.30 ಗಂಟೆಗೆ ರಾಯಚೂರಿನ ನಗರ ಉಪ ವಿಭಾಗ-2, ಮಾರ್ಚ್ 11ರ ಬೆಳಿಗ್ಗೆ 10.30ಕ್ಕೆ ಶಕ್ತಿನಗರ, ಮಧ್ಯಾಹ್ನ 3ಗಂಟೆಗೆ ರಾಯಚೂರು ಗ್ರಾಮೀಣ ಉಪ-ವಿಭಾಗ ಹಾಗೂ ಮಾರ್ಚ್ 13ರ ಬೆಳಿಗ್ಗೆ 10.30ಕ್ಕೆ ಸಿಂಧನೂರಿನಲ್ಲಿ ಗ್ರಾಹಕರ ಕುಂದು ಕೊರೆತೆ ತ್ರೈಮಾಸಿಕ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ಸಭೆಗೆ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಹಕರು ಹಾಜರಾಗಿ ತಮ್ಮ ಕುಂದು ಕೊರತೆಗಳನ್ನು ನಿವಾರಿಸಿಕೊಳ್ಳಬಹುದಾಗಿದೆ ಎಂದು ಕಾರ್ಯ ಮತ್ತು ಪಾಲನೆ ವೃತ್ತ ಅಧೀಕ್ಷಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರತಿಯೊಬ್ಬ ವಿದ್ಯಾರ್ಥಿಗಳು ಪರೀಕ್ಷೆ ಒಂದು ಹಬ್ಬದಂತೆ ಸಂಭ್ರಮಿಸಿ : ಆಂಜನೇಯ ನಸಲಾಪುರ

ಇವತ್ತಿನ ವಿದ್ಯಾರ್ಥಿಗಳಲ್ಲಿ ಪರೀಕ್ಷೆ ಒಂದು ದೊಡ್ಡ ಸಮಸ್ಯೆಯಾಗಿಬಿಟ್ಟಿದೆ. ಏಕೆಂದರೆ ಪರೀಕ್ಷೆಯನ್ನು ಎದುರಿಸದೆ ಮನಸ್ಸಿಲ್ಲದವರಿಗೆ ತುಂಬಾ ಕಷ್ಟಕರವಾಗಿದೆ.

ಪರೀಕ್ಷೆಯ ಭಯ ಅಥವಾ ಪರೀಕ್ಷಾ ಆತಂಕವು ಅನೇಕ ವಿದ್ಯಾರ್ಥಿಗಳು ಎದುರಿಸುವ ಸಾಮಾನ್ಯ ಸಮಸ್ಯೆಯಾಗಿದೆ. ಇದು ಕಲಿತದ್ದನ್ನು ಮರೆಯುವಂತೆ ಮಾಡಿ, ಕಾರ್ಯಕ್ಷಮತೆಯ ಮೇಲೆ ಪರಿಣಾಮ ಬೀರಬಹುದು. ಆದರೆ ಸರಿಯಾದ ತಂತ್ರಗಳನ್ನು ಅಳವಡಿಸಿಕೊಳ್ಳುವ ಮೂಲಕ ಈ ಭಯವನ್ನು ನಿವಾರಿಸಬಹುದು.

**ಪರೀಕ್ಷಾ ಭಯದ ಲಕ್ಷಣಗಳು** : ಪರೀಕ್ಷಾ ಭಯವು ದೈಹಿಕ ಮತ್ತು ಮಾನಸಿಕ ಲಕ್ಷಣಗಳನ್ನು ಹೊಂದಿರುತ್ತದೆ:

ಹೃದಯದ ಬಡಿತ ಹೆಚ್ಚಾಗುವುದು

ಬೆವರುವುದು, ನಡುಕ

ವಾಕರಿಕೆ ಅಥವಾ ತಲೆನೋವು

ಗೊಂದಲ, ಏಕಾಗ್ರತೆಯ ಕೊರತೆ

ನಕಾರಾತ್ಮಕ ಆಲೋಚನೆಗಳು

ನಿದ್ರಾಹೀನತೆ

**ಪರೀಕ್ಷಾ ಭಯ ನಿವಾರಣೆಯ ಮಾರ್ಗಗಳು**

1. ಸಮರ್ಪಕ ತಯಾರಿ

ಪರೀಕ್ಷಾ ಭಯ ನಿವಾರಣೆಗೆ ಅತ್ಯುತ್ತಮ ಮಾರ್ಗವೆಂದರೆ ಚೆನ್ನಾಗಿ ತಯಾರಿ ಮಾಡುವುದು. ವೇಳಾಪಟ್ಟಿ ರೂಪಿಸಿಕೊಂಡು, ಪ್ರತಿದಿನ ಸ್ವಲ್ಪ ಸ್ವಲ್ಪ ಓದುವ ಅಭ್ಯಾಸ ಮಾಡಿಕೊಳ್ಳಿ. ಕೊನೆಯ ಕ್ಷಣದ ಓದು ಆತಂಕ ಹೆಚ್ಚಿಸುತ್ತದೆ.

2. ಧನಾತ್ಮಕ ಆಲೋಚನೆ

"ನನಗೆ ಆಗುವುದಿಲ್ಲ" ಎಂದು ಯೋಚಿಸುವ ಬದಲು "ನಾನು ಪ್ರಯತ್ನಿಸುತ್ತೇನೆ", "ನಾನು ಸಿದ್ಧನಾಗಿದ್ದೇನೆ" ಎಂಬ ಧನಾತ್ಮಕ ಆಲೋಚನೆಗಳನ್ನು ಬೆಳೆಸಿಕೊಳ್ಳಿ. ಆತ್ಮವಿಶ್ವಾಸವೇ ಯಶಸ್ಸಿನ ಮೂಲ.

3. ಆಳವಾದ ಉಸಿರಾಟದ ವ್ಯಾಯಾಮ

ಪರೀಕ್ಷೆಗೆ ಮುನ್ನ ಅಥವಾ ಪರೀಕ್ಷೆಯ ಸಮಯದಲ್ಲಿ ಆತಂಕವಾದಾಗ, ಆಳವಾದ ಉಸಿರಾಟದ ವ್ಯಾಯಾಮ ಮಾಡಿ. ಇದು ಮನಸ್ಸನ್ನು ಶಾಂತಗೊಳಿಸುತ್ತದೆ ಮತ್ತು ಏಕಾಗ್ರತೆ ಹೆಚ್ಚಿಸುತ್ತದೆ.

4. ಸಾಕಷ್ಟು ನಿದ್ರೆ ಮತ್ತು ಆಹಾರ

ಪರೀಕ್ಷೆಗೆ ಮುನ್ನ ರಾತ್ರಿ ಚೆನ್ನಾಗಿ ನಿದ್ರೆ ಮಾಡಿ. ಪೌಷ್ಟಿಕ ಆಹಾರ ಸೇವಿಸಿ. ಖಾಲಿ ಹೊಟ್ಟೆಯಲ್ಲಿ ಅಥವಾ ಅತಿಯಾಗಿ ತಿಂದು ಪರೀಕ್ಷೆಗೆ ಹೋಗಬೇಡಿ.

5. ವಾಸ್ತವಿಕ ನಿರೀಕ್ಷೆಗಳು

ಪ್ರತಿಯೊಬ್ಬರಲ್ಲೂ ವಿಭಿನ್ನ ಸಾಮರ್ಥ್ಯಗಳಿವೆ. ನಿಮ್ಮಿಂದ ಸಾಧ್ಯವಾದಷ್ಟು ಉತ್ತಮವಾಗಿ ಮಾಡಲು ಪ್ರಯತ್ನಿಸಿ, ಪರಿಪೂರ್ಣತೆಯ ನಿರೀಕ್ಷೆ ಬೇಡ.

6. ವಿಶ್ರಾಂತಿ ತಂತ್ರಗಳು

ಯೋಗ, ಧ್ಯಾನ, ಸಂಗೀತ ಕೇಳುವುದು ಮುಂತಾದ ವಿಶ್ರಾಂತಿ ತಂತ್ರಗಳನ್ನು ಅಭ್ಯಾಸ ಮಾಡಿ. ಇವು ಮಾನಸಿಕ ಒತ್ತಡ ಕಡಿಮೆ ಮಾಡಲು ಸಹಾಯಕ.

7. ಸಮಯ ನಿರ್ವಹಣೆ

ಪರೀಕ್ಷಾ ಸಮಯದಲ್ಲಿ ಪ್ರತಿ ಪ್ರಶ್ನೆಗೆ ಎಷ್ಟು ಸಮಯ ಮೀಸಲಿಡಬೇಕೆಂದು ಯೋಜಿಸಿ. ಸುಲಭವಾದ ಪ್ರಶ್ನೆಗಳಿಗೆ ಮೊದಲು ಉತ್ತರಿಸಿ, ನಂತರ ಕಠಿಣ ಪ್ರಶ್ನೆಗಳತ್ತ ತಿರುಗಿ.

**ಪರೀಕ್ಷಾ ದಿನದ ಸಲಹೆಗಳು:** ಬೇಗ ಎದ್ದು, ತಯಾರಾಗಿ, ಸಮಯಕ್ಕೆ ಸರಿಯಾಗಿ ಪರೀಕ್ಷಾ ಕೇಂದ್ರ ತಲುಪಿ

ಸ್ನೇಹಿತರೊಂದಿಗೆ ಪರೀಕ್ಷೆ ಕುರಿತು ಚರ್ಚಿಸುವುದನ್ನು ತಪ್ಪಿಸಿ

ಪ್ರಶ್ನೆ ಪತ್ರಿಕೆ ಓದಲು ಸಮಯ ತೆಗೆದುಕೊಳ್ಳಿ

ಉತ್ತರ ಬರೆಯಲು ಆರಂಭಿಸುವ ಮೊದಲು 2–3 ನಿಮಿಷ ಯೋಜನೆ ರೂಪಿಸಿ

ಅತಿಯಾದ ಆತಂಕವಾದರೆ, ಒಮ್ಮೆ ಕಣ್ಣು ಮುಚ್ಚಿ ಆಳವಾಗಿ ಉಸಿರಾಡಿ

ಪರೀಕ್ಷೆಯ ಭಯ ಸಹಜ, ಆದರೆ ಅದು ನಿಮ್ಮನ್ನು ನಿಯಂತ್ರಿಸಲು ಬಿಡಬೇಡಿ. ಸರಿಯಾದ ತಯಾರಿ, ಧನಾತ್ಮಕ ದೃಷ್ಟಿಕೋನ ಮತ್ತು ವಿಶ್ರಾಂತಿ ತಂತ್ರಗಳ ಮೂಲಕ ನೀವು ಈ ಭಯವನ್ನು ಜಯಿಸಬಹುದು. ನಿಮ್ಮ ಪ್ರಯತ್ನವೇ ಮುಖ್ಯ, ಫಲಿತಾಂಶವಲ್ಲ. ಶುಭವಾಗಲಿ! ನಿಮ್ಮ ಮುಂದಿನ ಭವಿಷ್ಯ ಉಜ್ವಲವಾಗಲಿ.ಕಲಿಸಿದ ಗುರುಗಳಿಗೂ, ತಂದೆ – ತಾಯಿಗಳಿಗೂ ಕೀರ್ತಿಯನ್ನು ತರುವಂತವರಾಗಿ ಎಂದು ಹಾರೈಸುತ್ತೇನೆ.

**ಆಂಜನೇಯ**
**ನಸಲಾಪುರ**

**ಉಪನ್ಯಾಸಕರು ಮತ್ತು**
**ಸಂಪನ್ಮೂಲ ವ್ಯಕ್ತಿ**



# ಎಮ್ಮಿಗನೂರು ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನ



**ಬಳ್ಳಾರಿ, ಮಾ.03:** ಕಂಪ್ಲಿ ತಾಲೂಕು ಎಮ್ಮಿಗನೂರು ಗ್ರಾಮದ ಎಸ್ ಡಬ್ಲ್ಯೂ ಎಸ್ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನದ ನಿಮಿತ್ತ ವಿಜ್ಞಾನ ವಸ್ತು ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿತ್ತು,

ಈ ವೇಳೆ ಮುಖ್ಯ ಶಿಕ್ಷಕ ಮಂಜಪ್ಪ ಹೂಗಾರ ಮಾತನಾಡಿ ಇಂದು ಕೇವಲ ಒಬ್ಬ ಮಹಾನ್ –ವಿಜ್ಞಾನಿಯನ್ನು ನೆನಪಿಸಿಕೊಳ್ಳುವುದಲ್ಲ ಇದು ನಮ್ಮ ಜೀವನದಲ್ಲಿ ವಿಜ್ಞಾನದ ಶಕ್ತಿಯನ್ನು ಗುರುತಿಸುವುದರ ಬಗ್ಗೆ ವಿಜ್ಞಾನವು ಕೇವಲ ಪಠ್ಯ ಪುಸ್ತಕಗಳು ಅಥವಾ ಪರೀಕ್ಷೆಯಲ್ಲಿ ಕಂಡು ಬರುವುದಿಲ್ಲ ಅದು ನಮ್ಮ ಸುತ್ತಲೂ ಇದೆ ಎಂದರು.

ನಂತರ 6 ಮತ್ತು 7ನೇ ತರಗತಿ ವಿದ್ಯಾರ್ಥಿಗಳು ಪಾಠ ಆಧಾರಿತ ವಿಜ್ಞಾನದ ಪ್ರಯೋಗಗಳನ್ನು ಪ್ರದರ್ಶಿಸಿ ನೆರೆದವರ ಗಮನವನ್ನು ಸೆಳೆದರು ಈ ಸಂದರ್ಭದಲ್ಲಿ ಸಹ ಶಿಕ್ಷಕರಾದ ಜ್ಯೋತಿ, ಸಂಗಮ್ಮ,ಲಕ್ಷ್ಮಿ, ಶಂಕ್ರಮ್ಮ,ವೀರೇಶ,ಮಲ್ಲೇಶ,ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

## ಮಲ್ಲಿಕಾರ್ಜುನ ಮುತ್ಯಾ ಪ್ರಕರಣ: ಸಾಮಾಜಿಕ ಜಾಲತಾಣಗಳಲ್ಲಿ ಫೋಟೋ ವಿಡಿಯೋ ಹಂಚಿಕೆ ಮಾಡಿದರೆ ಕಠಿಣ ಕ್ರಮ : ಪೃಥ್ವಿಕ್ ಶಂಕರ್ ಎಚ್ಚರಿಕೆ



**ಯಾದಗಿರಿ:ಮಾ.3:**ಮಲ್ಲಿಕಾರ್ಜುನ ಮುತ್ಯಾ ವಿರುದ್ಧ ದಾಖಲಾಗಿರುವ ಪೋಕ್ಸೋ ಪ್ರಕರಣಕ್ಕೆ ಸಂಬಂಧಿಸಿದಂತೆ ಪೀಡಿತ ಬಾಲಕಿಯನ್ನು ಗುರುತಿಸಬಹುದಾದ ಯಾವುದೇ ಮಾಹಿತಿ, ಫೋಟೋಗಳು ಅಥವಾ ವಿಡಿಯೋ ಕ್ಲಿಪ್‌ಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಲೋಡ್ ಮಾಡುವುದು, ಹಂಚಿಕೊಳ್ಳುವುದು ಅಥವಾ ಫಾರ್ವರ್ಡ್ ಮಾಡುವುದನ್ನು ಕಟ್ಟುನಿಟ್ಟಾಗಿ ನಿಷೇಧಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪೃಥ್ವಿಕ್ ಶಂಕರ್ ತಿಳಿಸಿದ್ದಾರೆ.

ಪ್ರಕರಣವು ಅತೀ ಸಂವೇದನಾಶೀಲವಾಗಿರುವುದರಿಂದ ಬಾಲಕಿಯ ಗೌಪ್ಯತೆ ಹಾಗೂ ಮಾನಸಿಕ ಸುರಕ್ಷತೆಯನ್ನು ಕಾಪಾಡುವುದು ಪ್ರತಿಯೊಬ್ಬರ ಕಾನೂನುಬದ್ಧ ಹೊಣೆಗಾರಿಕೆಯಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಪೀಡಿತೆಯ ಹೆಸರು, ವಿಳಾಸ, ಕುಟುಂಬ ಸದಸ್ಯರ ವಿವರಗಳು ಅಥವಾ ಸಂಬಂಧಿತ ದೃಶ್ಯಾವಳಿಗಳನ್ನು WhatsApp, Facebook, Instagram ಸೇರಿದಂತೆ ಯಾವುದೇ ಡಿಜಿಟಲ್ ವೇದಿಕೆಯಲ್ಲಿ ಹಂಚುವುದು ಪೋಕ್ಸೋ ಕಾಯ್ದೆಯ ಉಲ್ಲಂಘನೆಯಾಗಿದ್ದು, ಇಂತಹ ಕೃತ್ಯಗಳ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಎಚ್ಚರಿಸಿದ್ದಾರೆ.

ಈ ಪ್ರಕರಣಕ್ಕೆ ಸಂಬಂಧಿಸಿ ಯಾದಗಿರಿ ಜಿಲ್ಲೆಯ ಗೋಗಿ ಪೊಲೀಸ್ ಠಾಣೆಯಲ್ಲಿ ದಿನಾಂಕ 25–08–2026 ರಂದು ಶಹಾಪೂರದ ಅಭಿವೃದ್ಧಿ ಯೋಜನಾಧಿಕಾರಿ ಮಲ್ಲಣ್ಣ ತಂದೆ ಉಮಾಪತಿ ಅವರ ದೂರಿನ ಮೇರೆಗೆ ಮಲ್ಲಿಕಾರ್ಜುನ ಮುತ್ಯಾ ಸಾ: ಮಹಲ್ ರೋಜಾ ಇವರ ವಿರುದ್ಧ ಗುನ್ನೆ ನಂ. 25/2026ರಡಿ ಕಲಂ 75(2) ಬಿ.ಎನ್.ಎಸ್ ಕಾಯ್ದೆ–2023 ಹಾಗೂ ಕಲಂ 12 ಪೋಕ್ಸೋ ಕಾಯ್ದೆ–2012 ಅನ್ವಯ ಪ್ರಕರಣ ದಾಖಲಾಗಿದ್ದು, ತನಿಖೆ ಪ್ರಗತಿಯಲ್ಲಿದೆ ಎಂದು ತಿಳಿಸಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಅನಧಿಕೃತ ಮಾಹಿತಿ ಹರಡುವುದು ತನಿಖೆಗೆ ಅಡ್ಡಿಯಾಗುವುದಲ್ಲದೆ, ಪೀಡಿತೆಯ ಗೌರವಕ್ಕೂ ಧಕ್ಕೆ ತರುತ್ತದೆ. ಸೈಬರ್ ವಿಭಾಗವು ಇಂತಹ ಚಟುವಟಿಕೆಗಳ ಮೇಲೆ ನಿಗಾವಹಿಸಿದ್ದು, ನಿಯಮ ಉಲ್ಲಂಘಿಸುವವರನ್ನು ಗುರುತಿಸಿ ಕಾನೂನು ಕ್ರಮಕ್ಕೆ ಒಳಪಡಿಸಲಾಗುತ್ತದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾರ್ವಜನಿಕರು ಯಾವುದೇ ಅಪರಿಷ್ಕೃತ ಮಾಹಿತಿ ಅಥವಾ ದೃಶ್ಯಾವಳಿ ಸಿಕ್ಕಲ್ಲಿ ಅದನ್ನು ಫಾರ್ವರ್ಡ್ ಮಾಡುವುದನ್ನು ತಪ್ಪಿಸಿ, ಕಾನೂನು ಸುವ್ಯವಸ್ಥೆ ಕಾಪಾಡಲು ಸಹಕರಿಸುವಂತೆ ಜಿಲ್ಲಾ ಪೊಲೀಸ್ ಇಲಾಖೆ ಮನವಿ ಮಾಡಿದೆ.

# ಭೂಹೀನ ದಲಿತ ಕುಟುಂಬಗಳಿಗೆ ಹಕ್ಕಿನ ಭೂಮಿ ನೀಡುವವರೆಗೂ ಹೋರಾಟ ನಿಲ್ಲದು




**ಶಹಾಪೂರ (ಯಾದಗಿರಿ):ಮಾ.3:** ಸಾಮಾಜಿಕ ನ್ಯಾಯ, ಸಮಾನತೆ ಹಾಗೂ ಸಂವಿಧಾನಬದ್ಧ ಹಕ್ಕುಗಳ ಜಾರಿಗೆ ಒತ್ತಾಯಿಸಿ ಕರ್ನಾಟಕ ದಲಿತ ಸಂಘರ್ಷ ಸಮಿತಿ (ಸಂಯೋಜಕ) ಜಿಲ್ಲಾ ಸಮಿತಿ ಯಾದಗಿರಿ ನೇತೃತ್ವದಲ್ಲಿ ಶಹಾಪೂರ ನಗರದ ಬಸವೇಶ್ವರ ವೃತ್ತದಲ್ಲಿ ಭವ್ಯ ಹಾಗೂ ಸಂಘಟಿತ ಪ್ರತಿಭಟನೆ ನಡೆಯಿತು. ನೂರಾರು ಮಹಿಳೆಯರು ತಮಟೆ ಬಾರಿಸುವ ಮೂಲಕ ಸರ್ಕಾರದ ಗಮನ ಸೆಳೆಯುವ ವಿಶಿಷ್ಟ ರೀತಿಯ ಹೋರಾಟಕ್ಕೆ ಚಾಲನೆ ನೀಡಿದರು.

ಭೂಹೀನ ದಲಿತ ಬಡ ಕುಟುಂಬಗಳಿಗೆ ವಸತಿ ನಿವೇಶನ, ಸ್ಮಶಾನ ಭೂಮಿ, ಮನೆ ನಿರ್ಮಾಣಕ್ಕೆ ಅಗತ್ಯ ಭೂ ಒಡೆತನ ಹಕ್ಕುಪತ್ರಗಳು ಸೇರಿದಂತೆ ವಿವಿಧ ಮೂಲಭೂತ ಸೌಲಭ್ಯಗಳನ್ನು ತಕ್ಷಣ ಕಲ್ಪಿಸಬೇಕು. ಈ ಕುರಿತು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ವಿಶೇಷ ಸಮಿತಿ ಸಭೆ ಕರೆಯಿಸಿ ಬಾಕಿ ಉಳಿದಿರುವ ಅರ್ಜಿಗಳ ಪರಿಶೀಲನೆ ನಡೆಸಿ ನ್ಯಾಯೋಚಿತ ಹಂಚಿಕೆ ಮಾಡಬೇಕು ಎಂದು ಸಂಘಟನೆ ಒತ್ತಾಯಿಸಿತು.

ಪ್ರತಿಭಟನಾಕಾರರು "ಭೂಮಿ ನಮ್ಮ ಮೂಲಭೂತ ಹಕ್ಕು", "ಸಾಮಾಜಿಕ ನ್ಯಾಯ ಜಾರಿಗೊಳಿಸಬೇಕು" ಎಂಬ ಘೋಷಣೆಗಳೊಂದಿಗೆ ಬಸವೇಶ್ವರ ವೃತ್ತದಲ್ಲಿ ಜೈಗೋಷಣೆ ಮೊಳಗಿಸಿದರು. ಹಲವು ಗ್ರಾಮಗಳಲ್ಲಿ ದಲಿತ ಕುಟುಂಬಗಳು ದಶಕಗಳಿಂದ ಸರ್ಕಾರಿ ಭೂಮಿ ಹಂಚಿಕೆಗೆ ಕಾಯುತ್ತಿದ್ದು, ಮನೆ ನಿರ್ಮಾಣಕ್ಕೆ ನಿವೇಶನವಿಲ್ಲದೆ ಸಂಕಷ್ಟ ಜೀವನ ನಡೆಸುತ್ತಿರುವುದು ದುರ್ಭಾಗ್ಯಕರ ಸ್ಥಿತಿ ಎಂದು ವಕ್ತಾರರು ಕಿಡಿಕಾರಿದರು.

ಪ್ರತಿಭಟನೆ ಬಳಿಕ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರಾದ ಶರಣಬಸಪ್ಪ ಗೌಡ ದರ್ಶನಾಪೂರ ಅವರಿಗೆ ಮನವಿ ಸಲ್ಲಿಸಲಾಯಿತು. ಸಚಿವರು ಮನವಿ ಸ್ವೀಕರಿಸಿ, ಸಂಘಟನೆ ಮುಂದಿಟ್ಟಿರುವ ಬೇಡಿಕೆಗಳನ್ನು ಸಮಗ್ರವಾಗಿ ಪರಿಶೀಲಿಸಿ ಹಂತ ಹಂತವಾಗಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳುವುದಾಗಿ ಭರವಸೆ ನೀಡಿದರು.

ಹತ್ತಿಗುಡೂರ, ಕೊಂಗೊಂಡಿ, ಯಕ್ಷಿಂತಿ, ಅನವಾರ, ಹಯ್ಯಾಳ, ಕೆ.ಮಾಲಹಳ್ಳಿ, ಬೊಮ್ಮನಹಳ್ಳಿ, ಐಕೂರ, ಸಲದಪೂರ ಸೇರಿದಂತೆ ಅನೇಕ ಗ್ರಾಮಗಳ ಭೂಹೀನ ಕುಟುಂಬಗಳಿಗೆ ತ್ವರಿತವಾಗಿ ಭೂಮಿ ಹಾಗೂ ವಸತಿ ಸೌಲಭ್ಯ ಒದಗಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ಮಹಿಳೆಯರ ಸಕ್ರಿಯ ಭಾಗವಹಿಸುವಿಕೆ ಹೋರಾಟಕ್ಕೆ ಹೊಸ ಉತ್ಸಾಹ ತುಂಬಿತು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಹತ್ತಿಗುಡೂರ ಶರಣರಡ್ಡಿ ಮಾತನಾಡಿ, "ಸಂವಿಧಾನವು ನೀಡಿರುವ ಹಕ್ಕುಗಳನ್ನು ಪಡೆಯಲು ನಮ್ಮ ಹೋರಾಟ ಸುದೀರ್ಘವಾದರೂ ಶಾಂತಿಯುತವಾಗಿರುತ್ತದೆ. ದಲಿತ ಸಮುದಾಯದ ಆರ್ಥಿಕ ಹಾಗೂ ಸಾಮಾಜಿಕ ಸಬಲೀಕರಣವೇ ನಮ್ಮ ಪರಮ ಉದ್ದೇಶ" ಎಂದು ಸ್ಪಷ್ಟಪಡಿಸಿದರು.

ಪ್ರತಿಭಟನೆಯಲ್ಲಿ ಸಂಘಟನೆ ಮುಖಂಡರು, ಮಹಿಳಾ ಕಾರ್ಯಕರ್ತರು ಹಾಗೂ ನೂರಾರು ಗ್ರಾಮಸ್ಥರು ಭಾಗವಹಿಸಿ ಭೂಹೀನರಿಗೆ ನ್ಯಾಯ ದೊರಕುವವರೆಗೆ ಹೋರಾಟ ಮುಂದುವರಿಯಲಿದೆ ಎಂಬ ದೃಢ ಸಂಕಲ್ಪ ವ್ಯಕ್ತಪಡಿಸಿದರು.

# ಉತ್ತಮ ಫಲಿತಾಂಶಕ್ಕೆ ಸತತ ಪ್ರಯತ್ನ ಅತಿ ಮುಖ್ಯ:ವೃಷಬೇಂದ್ರಯ್ಯ



**ಸೈದಾಪುರ:ಮಾ.3:**ಉತ್ತಮ ಫಲಿತಾಂಶಕ್ಕೆ ಸತತ ಪ್ರಯತ್ನ ಅತಿ ಮುಖ್ಯವಾಗಿದೆ. ಇದಕ್ಕಾಗಿ ನಮ್ಮದೆಯಾದ ವೇಳಾಪಟ್ಟಿಯೊಂದಿಗೆ ಶಿಕ್ಷಕರ ಮಾರ್ಗದರ್ಶನದಲ್ಲಿ ಪ್ರಯತ್ನ ಮಾಡಬೇಕು ಎಂದು ಡಯಟ್ ಪ್ರಾಂಶುಪಾಲ ವೃಷಬೇಂದ್ರಯ್ಯ ಅಭಿಪ್ರಾಯಪಟ್ಟರು. ಪಟ್ಟಣದ ವಿದ್ಯಾ ವರ್ಧಕ ಪ್ರೌಢ ಶಾಲೆಗೆ ಹಠಾತ ಭೇಟಿ ನೀಡಿ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ಮಾಡಿ ಮಾತನಾಡಿದರು. ಪರೀಕ್ಷೆಗೆ ಕೆಲವೇ ದಿನಗಳಿದ್ದೂ ಅದಕ್ಕೆ ಭಯ ಪಡದೆ ಸಂತೋಷದಿಂದ ಪರೀಕ್ಷೆಯನ್ನು ಎದುರಿಸಿ ಇದಕ್ಕಾಗಿ ವಿಷಯವಾರು ಶಿಕ್ಷಕರ ಮಾರ್ಗದರ್ಶನ ಪಡೆದುಕೊಂಡು ಅಭ್ಯಾಸ ಮಾಡುವ ಮೂಲಕ ಶಾಲೆಗೆ ಮತ್ತು ಪೋಷಕರಿಕೆ ಹೆಸರು ತರುವ ವಿದ್ಯಾರ್ಥಿಗಳು ನಿವಾಗಬೇಕು. ಶಾಲೆಗೆ ಯಾವುದೇ ಕಾರಣಕ್ಕೂ ಗೈರು ಹಾಜರಿ ಆಗಬಾರದು. ಸತತ ಹಾಜರಿ ಇದ್ದೂ ಇಲಾಖೆ ವತಿಯಿಂದ ನೀಡಲಾದ ಮಾದರಿ ಪ್ರಶ್ನೆ ಪತ್ರಿಕೆಗಳು ಸೇರಿದಂತೆ ಇಗಾಗಲೇ ತೆಗೆದುಕೊಂಡ ಪೂರ್ವಭಾವಿ ಪರೀಕ್ಷೆಗಳ ಪ್ರಶ್ನೆ ಪತ್ರಿಕೆಗಳ ನಿರಂತರ ಅಭ್ಯಾಸ ಮಾಡುವ ಮೂಲಕ ಜಿಲ್ಲೆಯ ಫಲಿತಾಂಶ ಹೆಚ್ಚಾಗಬೇಕು. ಇದಕ್ಕಾಗಿ ಶಿಕ್ಷಕರು ಗುಣಾತ್ಮಕ ಹಾಗೂ ಪರಿಣಾತ್ಮಕ ಗುರಿಯೊಂದಿಗೆ ಕೆಲಸ ಮಾಡಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಮುಖ್ಯಗುರು ಲಿಂಗಾರಡ್ಡಿ ನಾಯಕ, ಕರಬಸಯ್ಯ ದಂಡಿಗಿಮಠ, ಗೂಳಪ್ಪ.ಎಸ್.ಮಲ್ಹಾರ, ಕಾಶೀನಾಥ ಶೇಖಸಿಂದಿ, ಸಂಗಾರೆಡ್ಡಿ ಪಾಟೀಲ, ಶಿಕ್ಷಕರು, ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಸೇರಿದಂತೆ ಇತರರಿದ್ದರು.
ಜಿಲ್ಲೆಯಲ್ಲಿ ಅತಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿದ ಅನುದಾನಿತ ಶಾಲೆ ಇದಾಗಿದೆ. ಇದು ಫಲಿತಾಂಶದ ಮೇಲೂ ಪ್ರಭಾವ ಬೀರುವದರಿಂದ ಇಲ್ಲಿನ ಶಿಕ್ಷಕರ ಪ್ರಯತ್ನ ಅತಿ ಹೆಚ್ಚಿನದಾಗಿದೆ. ದಾಖಲಾತಿಗೆ ತಕ್ಕಂತೆ ಹಾಜರಾತಿ ಇರುವುದು ಸಂತಸವನ್ನುಂಟು ಮಾಡಿದೆ. ಪರೀಕ್ಷೆ ಭಯ ದೂರ ಮಾಡಿ ಆತ್ಮ ವಿಶ್ವಾಸದಿಂದ ವಿದ್ಯಾರ್ಥಿಗಳು ಪರೀಕ್ಷೆ ಬರೆಯುವಂತೆ ಮಾಡುವಲ್ಲಿ ಶಿಕ್ಷಕರರು ಪ್ರಯತ್ನ ಮಾಡಬೇಕು.
ವೃಷಬೇಂದ್ರಯ್ಯ ಡಯಟ್ ಪ್ರಾಂಶುಪಾಲರು ಯಾದಗಿರಿ

# ಜನತಾ ಬಜಾರ್ ಅಧ್ಯಕ್ಷರ ರಾಜೀನಾಮೆ

**ಬಳ್ಳಾರಿ, ಮಾ.03:** ಇಲ್ಲಿನ ಜನತಾ ಬಜಾರ್ ಆಡಳಿತ ಮಂಡಳಿಯ ಅವಧಿ ಇನ್ನು ಒಂದು ವರ್ಷ ಬಾಕಿ ಇರುವಾಗ ಹಾಲಿ ಅಧ್ಯಕ್ಷರಾಗಿದ್ದ ಕೆ.ಎ.ವೇಮಣ್ಣ ಅವರು ತಮ್ಮ ಸ್ಥಾನಕ್ಕೆ ನಿನ್ನೆ ರಾಜೀನಾಮೆ ನೀಡಿದ್ದಾರೆ.

ಈ ಮಧ್ಯೆ ಜನತಾ ಬಜಾರ್ ನ ಮಾಜಿ ಅಧ್ಯಕ್ಷ, ಹಾಲಿ ನಿರ್ದೇಶಕ ಜಿ.ನೀಲಕಂಠಪ್ಪ ಅವರು ಸಹ ರಾಜೀನಾಮೆ ತಮ್ಮ ಸ್ಥಾನಕ್ಕೆ ರಾಜಿನಾಮೆ ನೀಡಿದ್ದಾರೆ.
ರಾಜೀನಾಮೆ ಬಗ್ಗೆ ಸಂಜೆವಾಣಿ ಜೊತೆ ಮಾತನಾಡಿದ ವೇಮಣ್ಣ ಅವರು ಕಳೆದ ಒಂದು ವರ್ಷ ತಾವು ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು. ಮತ್ತೊಬ್ಬರಿಗೆ ಅವಕಾಶ ನೀಡುವ ದೃಷ್ಟಿಯಿಂದ ರಾಜೀನಾಮೆ ನೀಡಿರುವುದಾಗಿ ತಿಳಿಸಿದರು.
ನೀಲಕಂಠಪ್ಪ ಅವರು ತಾವು ರಾಜೀನಾಮೆ ನೀಡಿರುವುದು ಸತ್ಯ. ಆದರೆ ಸಲ್ಲಿಸಿದ 14 ದಿನದೊಳಗೆ ಹಿಂದಕ್ಕೆ ಪಡೆಯಲು ಕಾನೂನಿನಲ್ಲಿ ಅವಕಾಶ ಇದೆ ಎಂದಿದ್ದಾರೆ.
ಇನ್ನು ನಂತರ ಅಧ್ಯಕ್ಷರಾಗಲು ಪಲ್ಲೇದ ಮೈತ್ರಿ ಮತ್ತು ಕೇದಾರ ಅವರ ನಡುವೆ ಪೈಪೋಟಿ ಇದೆ. ಇವರಲ್ಲಿ ಯಾರು ಆಗುತ್ತಾರೆ. ನಗರದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಅವರ ಕೃಪಾ ಕಟಾಕ್ಷ ಯಾರ ಮೇಲಿದೆ. ಬರುವ ಒಂದು ವರ್ಷದ ಅವಧಿಯನ್ನು ಇಬ್ಬರು ಹಂಚಿಕೊಳ್ಳುತ್ತಾರ, ಇವರಲ್ಲಿ ಯಾರು ಮೊದಲಿಗೆ ಅಧ್ಯಕ್ಷರಾಗುತ್ತಾರೆ ಎಂಬುದನ್ನು ಕಾದು ನೋಡಬೇಕಿದೆ.

# ಮಾ. 08 ರಂದು ಐತಿಹಾಸಿಕ ವೈಭವದ ಶರಣಬಸವೇಶ್ವರ ಯಾತ್ರೆ ಮತ್ತು ರಥೋತ್ಸವ

**ಕಲಬುರಗಿ;ಮಾ.3:** 18ನೇ ಶತಮಾನದ ಸಮಾಜ ಸುಧಾರಕ ಮತ್ತು ಸಮಾಜಕ್ಕೆ ತ್ಯಾಗ ಮತ್ತು ನಿಸ್ವಾರ್ಥ ಸೇವೆಯ ಸಾಕಾರರೂಪವಾದ ಸಂತ ಶರಣಬಸವೇಶ್ವರರ 204ನೇ ಪುಣ್ಯತಿಥಿಯನ್ನು ಸ್ಮರಿಸುವ ಐತಿಹಾಸಿಕ ಶರಣಬಸವೇಶ್ವರ ಯಾತ್ರೆ ಮತ್ತು ಪ್ರಸಿದ್ಧ ರಥೋತ್ಸವವು ಮಾರ್ಚ 8ನೇ ತಾರೀಖಿನಂದು ಕಲಬುರಗಿ ನಗರದ ವಿಶಾಲವಾದ ಶರಣಬಸವೇಶ್ವರ ದೇವಾಲಯ ಸಂಕೀರ್ಣದಲ್ಲಿ ನಡೆಯಲಿದೆ ಎಂದು ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರಾದ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಹೇಳಿದರು.

ಕಲಬುರಗಿ ನಗರದ ಶರಣಬಸವೇಶ್ವರ ದೇವಾಲಯದ ಆವರಣದಲ್ಲಿರುವ ದಾಸೋಹ ಮಹಾಮನೆಯಲ್ಲಿ ಸೋಮವಾರ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಮಾತೋಶ್ರೀ ಡಾ. ಅವ್ವಾಜಿಯವರು, 9ನೇ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಮತ್ತು ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ ಅವರ ಉಪಸ್ಥಿತಿಯಲ್ಲಿ ಯಾತ್ರೆ ಮತ್ತು ರಥೋತ್ಸವವು ಶರಣಬಸವೇಶ್ವರ ಸಂಸ್ಥಾನದ ಕ್ಯಾಲೆಂಡರ್‌ನಲ್ಲಿ ಪ್ರಮುಖ ದಿನಗಳಲ್ಲಿ ಒಂದಾಗಿದೆ. ಶರಣಬಸವೇಶ್ವರ ಯಾತ್ರೆ ಮತ್ತು ರಥೋತ್ಸವ ಪ್ರಾರಂಭವಾಗುವ ಮೊದಲು ದೇವಾಲಯದಲ್ಲಿ ಅಲಂಕರಿಸಲಾದ ರಥದಲ್ಲಿ ಸಾಂಪ್ರದಾಯಿಕ ಆಚರಣೆಗಳು ಮತ್ತು ಪೂಜೆಗಳನ್ನು ನಡೆಸಲಾಗುವುದು ಎಂದರು.

ಸಂಸ್ಥಾನ ಮತ್ತು ಸಂಘದ ಎಲ್ಲಾ ಚಟುವಟಿಕೆಗಳಿಗೆ ಮಾರ್ಗದರ್ಶಕ ಶಕ್ತಿಯಾಗಿದ್ದ ಸಂತ ಶರಣಬಸವೇಶ್ವರ ಮತ್ತು ದಾಸೋಹ ಸಂಸ್ಕೃತಿಗೆ ಹೊಸ ಅರ್ಥ ಮತ್ತು ನಿರ್ದೇಶನ ನೀಡಿದ ಸಂತರು ಕಲ್ಯಾಣ ಕರ್ನಾಟಕ ಪ್ರದೇಶದ ಜನರಿಗೆ ಈ ಸಂಸ್ಕೃತಿಯನ್ನು ಜೀವನ ವಿಧಾನವನ್ನಾಗಿ ಮಾಡಿದ್ದಾರೆ. 250 ವರ್ಷಗಳ ಹಿಂದೆ ಮಹಾಮನೆಯ ಅಡುಗೆಮನೆಯಲ್ಲಿ ಹಸಿದವರ ಹೊಟ್ಟೆಗೆ ಆಹಾರ ನೀಡಲು ಸಂತರು ಹೊತ್ತಿಸಿದ ಬೆಂಕಿ ಇನ್ನೂ ಉರಿಯುತ್ತಿದೆ ಮತ್ತು ದೂರದ ಸ್ಥಳಗಳಿಂದ ದೇವಾಲಯಕ್ಕೆ ಭೇಟಿ ನೀಡುವ ಭಕ್ತರ ದೈಹಿಕ ಹಸಿವನ್ನು ನೀಗಿಸುತ್ತಿದೆ ಎಂದು ಹೇಳಿದರು.

ಶರಣಬಸವೇಶ್ವರ ಸಂಸ್ಥಾನದ ಪೀಠಾಧಿಪತಿಯ 204ನೇ ಪವಿತ್ರ ಸ್ಥಾನ (ಪೀಠಾರೋಹಣ) ಪೀಠಾರೋಹಣವನ್ನು ಈ ದಿನ ಸ್ಮರಿಸಲಾಗುತ್ತದೆ ಎಂದು ಡಾ. ಅವ್ವಾಜಿ ಹೇಳಿದರು.

ಕಳೆದ ನಾಲ್ಕು ದಶಕಗಳಿಗೂ ಹೆಚ್ಚು ಕಾಲದ ನಂತರ ಇದೇ ಮೊದಲ ಬಾರಿಗೆ, ಸಂಸ್ಥಾನದ 8ನೇ ಮಹಾದಾಸೋಹ ಪೀಠಾಧಿಪತಿಗಳಾದ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯಯವರ ವರ್ಚಸ್ವಿ ಉಪಸ್ಥಿತಿಯನ್ನು ಯಾತ್ರೆ ಕಳೆದುಕೊಳ್ಳುತ್ತಿದೆ ಎಂದು ಭಾವನಾತ್ಮಕವಾಗಿ ನುಡಿದರು. ಕಳೆದ ವರ್ಷ ಆಗಸ್ಟ್ 14ರಂದು ಇಹಲೋಕ ತ್ಯಜಿಸಿದ ಡಾ. ಅಪ್ಪಾಜಿ, ಅವರು ಅನುಸರಿಸಿದ ತತ್ವಗಳು ಮತ್ತು ತತ್ವಶಾಸ್ತ್ರವನ್ನು ಮುಂದುವರಿಸಲಾಗುವುದು ಹಾಗೂ ಅವರ ಎಲ್ಲಾ ಕನಸುಗಳನ್ನು ಕಠಿಣ ಪರಿಶ್ರಮ ಮತ್ತು ಸಮರ್ಪಣೆಯ ಮೂಲಕ ನೆರವೇರಿಸಲಾಗುವುದು ಎಂದು ಡಾ. ಅವ್ವಾಜಿ ಘೋಷಿಸಿದರು.

ಈ ವರ್ಷದ ರಥೋತ್ಸವ ಮತ್ತು ಯಾತ್ರೆಯ ವಿಶೇಷ ಆಕರ್ಷಣೆಯೆಂದರೆ ಶರಣಬಸವೇಶ್ವರ ದೇವಾಲಯ ಸಂಕೀರ್ಣದಲ್ಲಿ ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿ ಅವರ 30 ಅಡಿ ಎತ್ತರದ ಆಯತಾಕಾರದ ಕಟೌಟ್ ಅನ್ನು ನಿರ್ಮಿಸುವುದಾಗಿದೆ. ಲಿಂಗೈಕ್ಯ ಡಾ. ಅಪ್ಪಾಜಿ ಅವರ ಆಶಯದಂತೆ ದೇವಾಲಯ ಸಂಕೀರ್ಣದಲ್ಲಿರುವ ಸಂಸ್ಥಾನದ ಎಲ್ಲಾ ಪೀಠಾಧಿಪತಿಗಳ ಸಮಾಧಿಗಳ ಮೇಲೆ ಅಮೃತಶಿಲೆಯ ಮೇಲಾವರಣವನ್ನು ನಿರ್ಮಿಸಲಾಗುತ್ತಿದೆ ಎಂದು ಡಾ. ಅವ್ವಾಜಿ ತಿಳಿಸಿದರು.

ರಥೋತ್ಸವ ಪ್ರಾರಂಭವಾಗುವ ಮೊದಲು 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿ ಅವರು, ತಮ್ಮ ಮಾರ್ಗದರ್ಶನದಲ್ಲಿ ಮತ್ತು ಸಂಘದ ಕಾರ್ಯದರ್ಶಿಗಳಾದ ಶ್ರೀ ಬಸವರಾಜ ದೇಶಮುಖ ಅವರ ಸಹಕಾರದಿಂದ ಎಲ್ಲಾ ಧಾರ್ಮಿಕ ವಿಧಿವಿಧಾನಗಳನ್ನು ನಿರ್ವಹಿಸಲಿದ್ದಾರೆ ಎಂದು ಡಾ. ಅವ್ವಾಜಿ ಹೇಳಿದರು.

ಈ ಶುಭ ದಿನದಂದು ಸಂತ ಶರಣಬಸವೇಶ್ವರರು ಬಳಸಿದ ಪ್ರಸಾದ ಬಟ್ಟಲು (ಬೆಳ್ಳಿ ತಟ್ಟೆ) ಮತ್ತು ಅವರು ತಮ್ಮ ಜೀವಿತಾವಧಿಯಲ್ಲಿ ಧರಿಸಿದ್ದ ಲಿಂಗ ಸಜ್ಜಿಕೆ (ಪವಿತ್ರ ಲಿಂಗವನ್ನು ಇಟ್ಟುಕೊಳ್ಳಲು ಸಂತರು ಬಳಸುತ್ತಿದ್ದ ಶ್ರೀಗಂಧದ ಪೆಟ್ಟಿಗೆ) ಯನ್ನು ದೇವಾಲಯ ಸಂಕೀರ್ಣದಲ್ಲಿ ರಥೋತ್ಸವವನ್ನು ಕಣ್ತುಂಬಿಕೊಳ್ಳಲು ನೆರೆದ ಸಾವಿರಾರು ಭಕ್ತರಿಗೆ ಪ್ರದರ್ಶಿಸಲಾಗುವುದು ಎಂದು ಡಾ. ಅವ್ವಾಜಿ ಮತ್ತು ದೇಶಮುಖ ಹೇಳಿದರು. ಮಾತೋಶ್ರೀ ಡಾ. ಅವ್ವಾಜಿ ಮತ್ತು ಶ್ರೀ ದೇಶಮುಖ ಅವರ ಮಾರ್ಗದರ್ಶನದಲ್ಲಿ ರಥೋತ್ಸವದ ಆರಂಭವನ್ನು ಸೂಚಿಸಲು ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು ಶಂಖವನ್ನು ಊದಲಿದ್ದಾರೆ ಎಂದರು.

ವಾರ್ಷಿಕ ಯಾತ್ರೆ ಮತ್ತು ರಥೋತ್ಸವದ ಭಾಗವಾಗಿ, ಕಲಬುರಗಿ ಜಿಲ್ಲೆಯ ಚಿತ್ತಾಪುರ ತಾಲ್ಲೂಕಿನ ಮುಗಳನಾಗಾವಿಯಲ್ಲಿರುವ ಕಟ್ಟಿಮನಿ ಹಿರೇಮಠ ಸಂಸ್ಥಾನದ ಪೀಠಾಧಿಪತಿಗಳಾದ ಪೂಜ್ಯ ಶ್ರೀ ಅಭಿನವ ಸಿದ್ದಲಿಂಗ ಶಿವಾಚಾರ್ಯರು ಅವರಿಗೆ ಪ್ರತಿಷ್ಠಿತ "ಅಪ್ಪಾಜಿ" ಪ್ರಶಸ್ತಿಯನ್ನು ನೀಡಲು ಸಂಸ್ಥಾನ ನಿರ್ಧರಿಸಿದೆ ಎಂದು ಡಾ. ಅವ್ವಾಜಿ ಹೇಳಿದರು. ಸಂಸ್ಥಾನವು ಪ್ರತಿಷ್ಠಿತ "ದಾಸೋಹ ಜ್ಞಾನ ರತ್ನ" ಪ್ರಶಸ್ತಿಯನ್ನು ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷರೂ ಆಗಿರುವ, ಅರಣ್ಯ ಮತ್ತು ಪರಿಸರ ಖಾತೆ ಸಚಿವ ಶ್ರೀ ಈಶ್ವರ್ ಖಂಡ್ರೆ ಅವರಿಗೆ ಕೊಡಮಾಡಲು ನಿರ್ಧರಿಸಿದೆ. ಸಂಸ್ಥಾನವು, ಶ್ರೀ ಈಶ್ವರ್ ಖಂಡ್ರೆ ಅವರ ಪತ್ನಿಯವರಿಗೆ, ಅವರು ಸಮಾಜಕ್ಕೆ ಸಲ್ಲಿಸಿರುವ ಸೇವೆಯನ್ನು ಗುರುತಿಸಿ ಪ್ರತಿ ವರ್ಷ ಮಹಿಳೆಯರಿಗೆ ನೀಡುವ "ಅವ್ವ" ಪ್ರಶಸ್ತಿಯನ್ನು ನೀಡಲಾಗುವುದು ಎಂದು ತಿಳಿಸಿದರು.

ಯಾತ್ರೆ ಮತ್ತು ರಥೋತ್ಸವದ ಸಮಯದಲ್ಲಿ ದೇವಾಲಯಕ್ಕೆ ಭೇಟಿ ನೀಡುವ ಭಕ್ತಾದಿಗಳೆಲ್ಲರಲ್ಲಿ ಮನವಿ ಮಾಡಿದ ಡಾ. ಅವ್ವಾಜಿ, ವೃದ್ಧರು ಮತ್ತು ದುರ್ಬಲರಿಗೆ ದೇವಾಲಯದಲ್ಲಿ ದರ್ಶನ ಮಾಡುವಾಗ ಸಹಾಯ ಮಾಡಬೇಕು ಮತ್ತು ಅವರಿಗೆ ಸೂಕ್ತ ರಕ್ಷಣೆ ನೀಡಬೇಕು. ಭಕ್ತರು ಆಹಾರವನ್ನು ವ್ಯರ್ಥ ಮಾಡಬಾರದು ಮತ್ತು ಎಲ್ಲರ ಒಟ್ಟಾರೆ ಹಿತದೃಷ್ಟಿಯಿಂದ ದೇವಾಲಯ ಸಂಕೀರ್ಣವನ್ನು ಸ್ವಚ್ಛವಾಗಿಡಬೇಕು ಎಂದು ಈ ಸಂದರ್ಭದಲ್ಲಿ ಮನವಿ ಮಾಡಿದರು.



ಕಟ್ಟಿಮನಿ ಹಿರೇಮಠ ಸಂಸ್ಥಾನದ ಪೀಠಾದಿಪತಿಗಳಿಗೆ "ಅಪ್ಪಾಜಿ" ಪ್ರಶಸ್ತಿ ವಿತರಣೆಯ ಅಂಗವಾಗಿ ಫೆಬ್ರವರಿ 06ರಂದು ದಾಸೋಹ ಮಹಾಮನೆಯಲ್ಲಿ ಕಾರ್ಯಕ್ರಮ ನಡೆಯಲಿದ್ದು, ಇದರಲ್ಲಿ ದಿ ಹಿಂದೂ ಪ್ರಕಟಿಸಿದ "ದಾಸೋಹ ಮತ್ತು ಮಾನವೀಯತೆ" ಸೇರಿದಂತೆ ಇನ್ನೊಂದು ಪುಸ್ತಕ ಬಿಡುಗಡೆಯಾಗಲಿದೆ. ಮಾರ್ಚ 06 ರಂದು ಶ್ರೀ ಖಂಡ್ರೆ ಅವರ ಪೂರ್ವಾನುಮತಿ ಮೇರೆಗೆ ದಾಸೋಹ ಜ್ಞಾನ ರತ್ನ ಪ್ರಶಸ್ತಿಯನ್ನು ಮತ್ತೊಂದು ದಿನಾಂಕದಂದು ಅವರಿಗೆ ಪ್ರದಾನ ಮಾಡಲಾಗುವುದು ಮಾರ್ಚ 06ರಂದು ನಡೆಯಲಿರುವ ಸಮಾರಂಭದಲ್ಲಿ ಸಂಸ್ಥಾನವು ಒಟ್ಟು ಹತ್ತು ವೈದ್ಯ ದಂಪತಿಗಳಿಗೆ "ವೈದ್ಯರತ್ನ" ಪ್ರಶಸ್ತಿಯನ್ನು ನೀಡಿ ಗೌರವಿಸಲು ನಿರ್ಧರಿಸಿದೆ ಎಂದು ಮಾತೋಶ್ರೀ ಡಾ. ಅವ್ವಾಜಿ ಹೇಳಿದರು.

ದೇಶ ಮತ್ತು ವಿದೇಶಗಳ ಭಕ್ತರು ಕೋಮು ರೇಖೆಗಳನ್ನು ಮೀರಿ ವಿಶಾಲವಾದ ಶರಣಬಸವೇಶ್ವರ ದೇವಾಲಯ ಸಂಕೀರ್ಣದಲ್ಲಿ ಸಂತ ಶರಣಬಸವೇಶ್ವರರು ಬಳಸುತ್ತಿದ್ದ ಬೆಳ್ಳಿ ತಟ್ಟೆ (ಪ್ರಸಾದ ಬಟ್ಟಲು) ಪ್ರದರ್ಶನದ ಐತಿಹಾಸಿಕ ಘಟನೆಯನ್ನು ವೀಕ್ಷಿಸಲು ಒಂದೆಡೆ ಸೇರುತ್ತಾರೆ. ವರ್ಷಕ್ಕೊಮ್ಮೆ ರಥೋತ್ಸವದ ಸಮಯದಲ್ಲಿ ಪ್ರದರ್ಶಿಸಲಾಗುವ ಪ್ರಸಾದ ಬಟ್ಟಲನ್ನು ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು ರಥೋತ್ಸವದ ಆರಂಭವನ್ನು ಸೂಚಿಸಲು ಭಕ್ತರಿಗೆ ಪ್ರದರ್ಶಿಸುತ್ತಾರೆ. ಪ್ರಸಾದ ಬಟ್ಟಲು ಜೊತೆಗೆ, ಭಕ್ತರಿಗೆ ಶ್ರೀಗಂಧದ ಮರದಿಂದ ತಯಾರಿಸಲ್ಪಟ್ಟ ಮತ್ತು ಸಂತ ಶರಣಬಸವೇಶ್ವರರು ಬಳಸುತ್ತಿದ್ದ "ಲಿಂಗ ಸಜ್ಜಿಕೆ" (ಲಿಂಗವನ್ನು ಇಡಲು ಬಳಸುವ ಶ್ರೀಗಂಧದ ಪೆಟ್ಟಿಗೆ) ಯನ್ನು ನೋಡುವ ಅವಕಾಶವೂ ಸಿಗುತ್ತದೆ. ನೆರೆಯ ಆಂಧ್ರಪ್ರದೇಶ, ತೆಲಂಗಾಣ, ಮಹಾರಾಷ್ಟ್ರ ಮತ್ತು ಕರ್ನಾಟಕದ ವಿವಿಧ ಭಾಗಗಳ ದೂರದ ಜಿಲ್ಲೆಗಳಿಂದ ಭಕ್ತರು ವಾರ್ಷಿಕ ಯಾತ್ರಾ ಮತ್ತು ರಥೋತ್ಸವದಲ್ಲಿ ಭಾಗವಹಿಸಲು ಶರಣಬಸವೇಶ್ವರ ದೇವಾಲಯಕ್ಕೆ ಬರುತ್ತಾರೆ ಮತ್ತು ಸುಂದರವಾಗಿ ಅಲಂಕರಿಸಲ್ಪಟ್ಟ ರಥವನ್ನು ವಿಶಾಲವಾದ ದೇವಾಲಯ ಸಂಕೀರ್ಣದೊಳಗೆ ದೂರಕ್ಕೆ ಎಳೆಯುತ್ತಾರೆ. ಈ ವರ್ಷ, ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷರೂ ಆಗಿರುವ ಅರಣ್ಯ ಮತ್ತು ಪರಿಸರ ಖಾತೆ ಸಚಿವ ಶ್ರೀ ಈಶ್ವರ್ ಖಂಡ್ರೆ ಅವರು ದೇಣಿಗೆ ನೀಡಿದ ಅಮೂಲ್ಯವಾದ "ಕರುಂಗಲಿ" ಮರವನ್ನು ಬಳಸಿ ರಥವನ್ನು ಹೊಸದಾಗಿ ನಿರ್ಮಿಸಲಾಗಿದೆ ಎಂದು ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿಯವರು ಪತ್ರಿಕಾಗೋಷ್ಠಿಯಲ್ಲಿ ವಿವರಿಸಿದರು.

ಇಡೀ ಪ್ರದೇಶದಲ್ಲಿ ಜನರು ತಮ್ಮ ಇಚ್ಛೆಯಂತೆ ಹಣ, ಚಿನ್ನ ಮತ್ತು ಬೆಳ್ಳಿ ನಾಣ್ಯಗಳನ್ನು ಅರ್ಪಿಸಲು ಹುಂಡಿ ಇಲ್ಲದ ಏಕೈಕ ದೇವಾಲಯ ಇದಾಗಿರಬಹುದು. ಬದಲಾಗಿ ಭಕ್ತರು ತಮ್ಮ ಇಚ್ಛೆಯಂತೆ ದಾಸೋಹ ಸಂಪ್ರದಾಯವನ್ನು ಮುಂದುವರಿಸಲು ತಮ್ಮ ಕೊಡುಗೆಯಾಗಿ ದೇವಾಲಯಕ್ಕೆ ಆಹಾರ ಧಾನ್ಯಗಳನ್ನು ದಾನ ಮಾಡುತ್ತಾರೆ. ಈ ಪ್ರದೇಶದ ರೈತರು ತಮ್ಮ ವಾರ್ಷಿಕ ಆಹಾರ ಧಾನ್ಯಗಳು ಮತ್ತು ದ್ವಿದಳ ಧಾನ್ಯಗಳ ಒಂದು ಭಾಗವನ್ನು ದಾಸೋಹಕ್ಕಾಗಿ ದೇವಾಲಯಕ್ಕೆ ದಾನ ಮಾಡುವ ಸಂಪ್ರದಾಯವನ್ನು ಮುಂದುವರೆಸಿದ್ದಾರೆ ಎಂದರು.

ಈ ದೇವಾಲಯವು ಹಿಂದೂಗಳು ಮತ್ತು ಮುಸ್ಲಿಮರ ನಡುವೆ ಶಾಶ್ವತ ಬಾಂಧವ್ಯವನ್ನು ಸೃಷ್ಟಿಸುವ ಕೋಮು ಸೌಹಾರ್ದತೆಯ ಸಂಕೇತವಾಗಿದೆ ಮತ್ತು ಸ್ವಾತಂತ್ರ್ಯ ಹೋರಾಟದ ಸಮಯದಲ್ಲಿ ಮತ್ತು ನಿಜಾಮನ ದಬ್ಬಾಳಿಕೆಯ ಆಡಳಿತದ ವಿರುದ್ಧದ ಐತಿಹಾಸಿಕ ಸಶಸ್ತ್ರ ಹೋರಾಟದ ಸಮಯದಲ್ಲಿ ಸ್ವಾತಂತ್ರ್ಯ ಹೋರಾಟಗಾರರಿಗೆ ಸ್ಫೂರ್ತಿಯ ಮೂಲವಾಗಿತ್ತು. ರಥೋತ್ಸವದ ನಂತರ ದೇವಾಲಯದ ಎದುರಿನ ಯಾತ್ರಾ ಮೈದಾನದಲ್ಲಿ ಪ್ರದರ್ಶನಗಳು ನಡೆಯಲಿದ್ದು, ಇಲ್ಲಿ ದೇಶಾದ್ಯಂತ ವ್ಯಾಪಾರಿಗಳು ತಮ್ಮ ಮಳಿಗೆಗಳನ್ನು ಸ್ಥಾಪಿಸುತ್ತಾರೆ ಮತ್ತು ಮಕ್ಕಳು ಉತ್ತಮ ಸಮಯವನ್ನು ಕಳೆಯಲು ಆಟದ ಕೇಂದ್ರಗಳಿಗೆ ಪ್ರತ್ಯೇಕ ಪ್ರದೇಶವನ್ನು ಕಾಯ್ದಿರಿಸಲಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಸ್ಥಾನದ 9ನೇ ಮಹಾದಾಸೋಹ ಪೀಠಾಧಿಪತಿ ಪೂಜ್ಯ ದೊಡ್ಡಪ್ಪ ಅಪ್ಪಾಜಿಯವರು ಪತ್ರಕರ್ತರೊಂದಿಗೆ ಮಾತನಾಡಿದರು. ಈ ಸಂಧರ್ಭದಲ್ಲಿ ಕು. ಭವಾನಿ ಎಸ್. ಅಪ್ಪ, ಕು. ಶಿವಾನಿ ಎಸ್. ಅಪ್ಪ ಮತ್ತು ಕು. ಮಹೇಶ್ವರಿ ಎಸ್. ಅಪ್ಪ, ಡಾ. ಅಲ್ಲಮಪ್ರಭು ದೇಶಮುಖ ಹಾಗೂ ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಅನಿಲಕುಮಾರ ಬಿಡವೆ ಉಪಸ್ಥಿತರಿದ್ದರು.

## ಮಲ್ಲಾಬಾದ್ ಏತ ನೀರಾವರಿ ಯೋಜನೆಗೆ ತಕ್ಷಣ ಚಾಲನೆ ನೀಡಲು ಒತ್ತಾಯಿಸಿ ಹೋರಾಟ



**ಜೇವರ್ಗಿ,ಮಾ.3–**ಮಲ್ಲಾಬಾದ್ ಏತ ನೀರಾವರಿ ಯೋಜನೆಗೆ ತಕ್ಷಣ ಚಾಲನೆ ನೀಡಬೇಕು ಹಾಗೂ ಸರ್ಕಾರಿ ಶಾಲೆಗಳ ಮುಚ್ಚುವಿಕೆ ಕ್ರಮವನ್ನು ಹಿಂಪಡೆಯಬೇಕು ಎಂದು ರೈತ ಮುಖಂಡರು ಒತ್ತಾಯಿಸಿ, ಹೋರಾಟವನ್ನು ತೀವ್ರಗೊಳಿಸಲು ತೀರ್ಮಾನಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಮಹತ್ವದ ಸಭೆಯಲ್ಲಿ ಸರ್ಕಾರದ ಧೋರಣೆ ಕುರಿತು ತೀವ್ರ ಅಸಮಾಧಾನ ವ್ಯಕ್ತವಾಯಿತು.

ಸಭೆಯಲ್ಲಿ ಮಾತನಾಡಿದ ಮಹೇಶ್ ಕುಮಾರ್ ರಾಥೋಡ್ ಅವರು, "ಮಲ್ಲಾಬಾದ್ ಏತ ನೀರಾವರಿ ಯೋಜನೆ ರೈತರ ಜೀವನಾಡಿ. ಹಲವು ವರ್ಷಗಳಿಂದ ಬಾಕಿ ಉಳಿದಿರುವ ಈ ಯೋಜನೆಯನ್ನು ತಕ್ಷಣ ಜಾರಿಗೊಳಿಸಬೇಕು" ಎಂದು ಆಗ್ರಹಿಸಿದರು.

ಬಾಬು ಪಾಟೀಲ್ ಮುತ್ತಕೋಡ ಅವರು, "ಸರ್ಕಾರಿ ಶಾಲೆಗಳ ಮುಚ್ಚುವಿಕೆ ಗ್ರಾಮೀಣ ಬಡ ಮಕ್ಕಳ ಭವಿಷ್ಯಕ್ಕೆ ದೊಡ್ಡ ಹೊಡೆತ. ಶಾಲೆಗಳನ್ನು ಉಳಿಸಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು" ಎಂದು ಎಚ್ಚರಿಸಿದರು.

ಇಬ್ರಾಹಿಂ ಪಟೇಲ್ ಯಾಳವಾರ್ ಶಾಂತಿಪೂರ್ಣ ಹೋರಾಟದ ಮೂಲಕ ಸರ್ಕಾರದ ಗಮನ ಸೆಳೆಯಲು ಕರೆ ನೀಡಿದರು. ಮೈನುದ್ದಿನ್ ಇನಾಮ್ದಾರ್ (ವಕೀಲರು) ಅಗತ್ಯವಿದ್ದರೆ ಕಾನೂನು ಹೋರಾಟಕ್ಕೂ ಮುಂದಾಗುವುದಾಗಿ ತಿಳಿಸಿದರು.

ಸಭೆಯಲ್ಲಿ ಬಿ.ಹೆಚ್. ಮಾಲಿ ಪಾಟೀಲ್, ಭೀಮಶಂಕರ್ ಬಿಲ್ಲಾಡ, ಸಿದ್ದಲಿಂಗ ಪೂಜಾರಿ, ನಿಂಗಪ್ಪ ಪೂಜಾರಿ ಯಾಳವಾರ್, ಪರಮೇಶ್ ಬಿರಾಳ್, ಗುರುನಾಥ್ ಸಾಹು ರಾಜವಾಳ್, ಮಲ್ಲಿಕಾರ್ಜುನ್ ದೊಡ್ಮನಿ ಕೆಲ್ಲೂರು, ದೇವು ಚಿಗರಳ್ಳಿ, ಸಲೀಂ ಪಟೇಲ್ ಸಿಗರತಳ್ಳಿ, ಅಜೀಜ್ ಪಟೇಲ್, ಶಾಂತಯ್ಯ ಗುತ್ತೇದಾರ್, ರಫೀಕ್ ಸರ್ ಹಾಗೂ ಗಿರೀಶ ತುಂಬಗಿ ಸೇರಿದಂತೆ ಅನೇಕ ಮುಖಂಡರು ಭಾಗವಹಿಸಿದ್ದರು.

ಸರ್ಕಾರ ತಕ್ಷಣ ಸ್ಪಂದಿಸದಿದ್ದರೆ ಹಂತ ಹಂತವಾಗಿ ಪ್ರತಿಭಟನೆ ನಡೆಸುವ ಕುರಿತು ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಯಿತು. ಮೊದಲ ಹಂತದಲ್ಲಿ ಮನವಿ ಸಲ್ಲಿಕೆ, ನಂತರ ತಾಲೂಕು ಮಟ್ಟದ ಧರಣಿ ಹಾಗೂ ಅಗತ್ಯವಿದ್ದರೆ ಭಾರಿ ಪ್ರತಿಭಟನೆ ನಡೆಸಲು ರೂಪರೇಖೆ ಸಿದ್ಧಪಡಿಸಲಾಗಿದೆ.

ಒಟ್ಟಾರೆ, ಜೇವರ್ಗಿಯಲ್ಲಿ ಮಲ್ಲಾಬಾದ್ ಏತ ನೀರಾವರಿ ಯೋಜನೆ ಮತ್ತು ಸರ್ಕಾರಿ ಶಾಲೆಗಳ ಉಳಿವಿನ ವಿಚಾರ ಜನಾಂದೋಲನದ ರೂಪ ಪಡೆಯುತ್ತಿರುವುದು ಗಮನಾರ್ಹವಾಗಿದೆ. ಸರ್ಕಾರ ಈ ಬೇಡಿಕೆಗಳಿಗೆ ಸ್ಪಂದಿಸುತ್ತದೆಯೇ ಎಂಬುದು ಕಾದು ನೋಡಬೇಕಾಗಿದೆ.

## ಮಧ್ಯಪ್ರಾಚ್ಯ ದೇಶಗಳಲ್ಲಿನ ಬಿಕ್ಕಟ್ಟು ವಿಜಯಪುರ ಜಿಲ್ಲೆಯ ಪ್ರಯಾಣಿಕರ ನೆರವಿಗಾಗಿ ಸಹಾಯವಾಣಿ

**ವಿಜಯಪುರ,ಮಾ. 3:**ಮಧ್ಯಪ್ರಾಚ್ಯದ ಕೆಲವು ದೇಶಗಳಲ್ಲಿ ಪ್ರಚಲಿತದಲ್ಲಿರುವ ಅಸ್ಥಿರ ಪರಿಸ್ಥಿತಿಯಿಂದಾಗಿ ಅಂತರಾಷ್ಟ್ರೀಯ ವಿಮಾನಯಾನ ಸೇವೆಗಳಲ್ಲಿ ವ್ಯತ್ಯಯ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ವಿಜಯಪುರ ಜಿಲ್ಲೆಯ ಸಾರ್ವಜನಿಕರ ಹಿತದೃಷ್ಟಿಯಿಂದ ಜಿಲ್ಲಾಡಳಿತವು ಈ ಕೆಳಗಿನ ಮಾಹಿತಿಯನ್ನು ಹಂಚಿಕೊಂಡಿದೆ.

ವೈಮಾನಿಕ ನಿರ್ಬಂಧ ಮತ್ತು ಪ್ರಚಲಿತ ಸ್ಥಿತಿ ಇರಾನ್, ಇಸ್ರೇಲ್, ಲೆಬನಾನ್, ಸೌದಿ ಅರೇಬಿಯಾ ಸೇರಿದಂತೆ ಒಟ್ಟು 11 ದೇಶಗಳ ವೈಮಾನಿಕ ಮಾರ್ಗಗಳನ್ನು (Airspace) ಮಾರ್ಚ್ 2ರವರೆಗೆ ಮುಚ್ಚಲಾಗಿದೆ. ಈ ಅನಿರೀಕ್ಷಿತ ಅಡಚಣೆಯಿಂದಾಗಿ ಹಾಗೂ ಕರ್ನಾಟಕದ ಅನೇಕ ಪ್ರಯಾಣಿಕರು ಯುಎಇ (ದುಬೈ) ಸೇರಿದಂತೆ ವಿವಿಧ ಮಧ್ಯಪ್ರಾಚ್ಯ ರಾಷ್ಟಗಳಲ್ಲಿ ಸಿಲುಕಿಕೊಂಡಿದ್ದಾರೆ.

**ಜಿಲ್ಲಾಡಳಿತದ ಕ್ರಮಗಳು**–ಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರ ನಿರ್ದೇಶನದಂತೆ, ರಾಜ್ಯ ಮತ್ತು ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ 24ಥ7 ಕಾರ್ಯ ನಿರ್ವಹಿಸುತ್ತಿವೆ.

ವಿದೇಶಾಂಗ ವ್ಯವಹಾರಗಳ ಸಚಿವಾಲಯ ಮತ್ತು ಭಾರತೀಯ ರಾಯಭಾರಿ ಕಚೇರಿಗಳು ನೀಡುವ ಸೂಚನೆಗಳನ್ನು ಜಿಲ್ಲಾಡಳಿತವು ನಿರಂತರವಾಗಿ ಗಮನಿಸುತ್ತಿದೆ.

**ಸಹಾಯವಾಣಿ ಸಂಖ್ಯೆಗಳಿಗೆ**–ವಿಜಯಪುರ ಜಿಲ್ಲೆಯ ನಿವಾಸಿಗಳು ಅಥವಾ ಅವರ ಸಂಬಂಧಿಕರು ಹೆಚ್ಚಿನ ಮಾಹಿತಿಗಾಗಿ ಮತ್ತು ಸಹಾಯಕ್ಕಾಗಿ ಸಂಪರ್ಕಿಸಬಹುದು. ವಿಜಯಪುರ ಜಿಲ್ಲಾ ತುರ್ತು ಕಾರ್ಯಾಚರಣೆ ಕೇಂದ್ರ 08352-221261,222101, 1077 ಟೋಲ್ ಫ್ರೀ ಸಂಖ್ಯೆ ಹಾಗೂ ವಿಜಯಪುರದ ಜಿಲ್ಲಾ ವಿಪತ್ತು ನಿರ್ವಹಣಾ ಘಟಕದ ರಾಕೇಶ್ ಜೈನಾಪುರ ಇವರ ಮೊಬೈಲ್ ಸಂಖ್ಯೆ



7019682740,ರಾಜ್ಯ ತುರ್ತು ಕಾರ್ಯಾಚರಣೆ ಕೇಂದ್ರ 080-22340676, 080-22253707 , ಟೋಲ್ ಫ್ರೀ ಸಂಖ್ಯೆ: 1070 ಗೆ ಕರೆ ಮಾಡಿ ಮಾಹಿತಿ ಹಾಗೂ ಸಹಾಯ ಪಡೆಯಬಹುದು.

**ಸಾರ್ವಜನಿಕರಿಗೆ ಪ್ರಮುಖ ಸೂಚನೆಗಳು**–ಮಧ್ಯಪ್ರಾಚ್ಯ ದೇಶಗಳಲ್ಲಿರುವ ಕರ್ನಾಟಕದ ನಿವಾಸಿಗಳು ಹಾಗೂ ಜಿಲ್ಲೆಯವರಿದ್ದಲ್ಲಿ ಅಲ್ಲಿನ ಸ್ಥಳೀಯ ಸರ್ಕಾರಗಳು ನೀಡುವ ಸುರಕ್ಷತಾ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಬೇಕು.ಸಂಕಷ್ಟದಲ್ಲಿರುವವರು ಆಯಾ ದೇಶದ ಭಾರತೀಯ ರಾಯಭಾರಿ ಕಚೇರಿಯ ಸಹಾಯವಾಣಿಗೆ ಕರೆ ಮಾಡಬೇಕು ಅಥವಾ 'ಸಾರಥಿ ಸಹಾಯತಾ' (Sarthi Sahayata) ಪೋರ್ಟಲ್‌ನಲ್ಲಿ ನೋಂದಾಯಿಸಿಕೊಳ್ಳಬೇಕು.

ವಿಸಾ ಸಂಬಂಧಿತ ಸಮಸ್ಯೆಗಳಿದ್ದಲ್ಲಿ ಹತ್ತಿರದ ಎಫ್.ಆರ್.ಆರ್.ಒ (FRRO) ಕಚೇರಿಯನ್ನು ಸಂಪರ್ಕಿಸಬೇಕೆಂದು ವಿಜಯಪುರ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE